# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 228 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 27–03–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 228 | Title- Code: KARKAN 28269 | Chitradurga | Date: 27-03-2024 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಗೆ 200 ಸೀಟು ಬರಬಹುದು: ಸಚಿವ 2

ಫಿಲ್ಟರ್ ಆಗುವಾಗ ಅರ್‌ಓ ಘಟಕಗಳಲ್ಲಿ ಸಾವಿರಾರು ಲೀಟರ್ ನೀರು ವ್ಯರ್ಥ 3

ಬಾಡಾ ಕ್ರಾಸ್ ಚೆಕ್‌ಪೋಸ್ಟ್‌ನಲ್ಲಿ ಎರಡು ಪ್ರಕರಣಗಳಲ್ಲಿ7.43 ಲಕ್ಷ ನಗದು ವಶ 4



ಸುದ್ದಿ, ಜಾಹಿರಾತಿಗೆ 9686622252


## ಹಟ್ಟಿಯ ತೇರು ಬೀದಿಯಲ್ಲಿ ತಿಪ್ಪೇಶನ ವೈಭವ

# ಜನಸಾಗರದಲ್ಲಿ ಹರಿದ ಹಟ್ಟಿ ತಿಪ್ಪೇಶನ ತೇರು



» **ಚಿತ್ರದುರ್ಗ**

ಮಧ್ಯ ಕರ್ನಾಟಕದ ಬುಡಕಟ್ಟು ಸಮುದಾಯಗಳ ಆರಾಧ್ಯ ದೈವ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲೂಕಿನ ನಾಯಕನಹಟ್ಟಿಯ ಮಾಡಿದಷ್ಟು ನೀಡು ಭಿಕ್ಷೆ ಹಟ್ಟಿ ತಿಪ್ಪೇಶನ ರಥೋತ್ಸವ ಮಂಗಳವಾರ (ಮಾರ್ಚ್ 26) ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಬಹಳ ವಿಜೃಂಭಣೆಯಿಂದ ನೆರವೇರಿತು.ಮಠ ಮಠ ಮಧ್ಯಾಹ್ನವೇ ಬಿಸಿಲು, ಗಾಳಿ, ಧೂಳು ಯಾವುದನ್ನು ಲೆಕ್ಕಿಸದೆ ಹಟ್ಟಿ ತಿಪ್ಪೇಶನ ರಥೋತ್ಸವಕ್ಕೆ ಬೆಳಗ್ಗೆಯಿಂದಲೇ ಲಕ್ಷಾಂತರ ಭಕ್ತರು ಸಾಗರೋಪದಿಯಲ್ಲಿ ಸೇರಿದ್ದರು.

ಐತಿಹಾಸಿಕ ದೊಡ್ಡಕೆರೆ ಹೊಂದಿರುವ ಶ್ರೀ ಗುರು ತಿಪ್ಪೇರುದ್ರಸ್ವಾಮಿಯ ಪವಾಡಗಳ ಮೂಲಕ ಮಧ್ಯ ಕರ್ನಾಟಕ ಜನಮಾನದಲ್ಲಿ ನೆಲೆ ನಿಂತಿರುವ ರಥೋತ್ಸವ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಯಿತು. ಮಧ್ಯಾಹ್ನ 3:15ಗಂಟೆಗೆ ಚಿತ್ತಾ ನಕ್ಷತ್ರದಲ್ಲಿ ತಿಪ್ಪೇರುದ್ರಸ್ವಾಮಿ ರಥವನ್ನು ರಥದ ಬೀದಿಯಿಂದ ಹೊರಮಠದವರಿಗೆ ಭಕ್ತರು ಎಳೆದರು. ಈ ವೇಳೆ ಸಾಹಸ್ರಾರು ಭಕ್ತರು ರಥವನ್ನು ಎಳೆಯುವ ಮೂಲಕ ಭಕ್ತಿಭಾವದ ಸಮರ್ಪಣೆ ಅರ್ಪಿಸಿದರು. ತಿಪ್ಪೇರುದ್ರಸ್ವಾಮಿ ಐಕ್ಯ ಆಗಿರುವ ಹೊರಮಠ ಹಾಗೂ ದೇವರ ವಿಗ್ರಹ ಮತ್ತು ಮುಖ್ಯವಾಗಿರುವ ಒಳಮಠ ಎರಡು ಕಡೆಗಳಲ್ಲಿ ಬೆಳಗ್ಗೆಯಿಂದಲೇ ಬಿಡುವಿಲ್ಲದಂತೆ ವಿವಿಧ ಧಾರ್ಮಿಕ ಪೂಜಾ ಕಾರ್ಯಕ್ರಮಗಳು ನಡೆದವು. ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದು ಪುಳಕಿತರಾದರು. ಶ್ರೀ ತಿಪ್ಪೇರುದ್ರಸ್ವಾಮಿಯ ಜಾತ್ರೆಯ ವಿಶೇಷತೆಗಳಲ್ಲಿ ಒಂದಾಗಿರುವ ಮುಕ್ತಿ ಬಾವುಟ ಹರಾಜು ಪ್ರಕ್ರಿಯೆ







ಒಂದಾಗಿದೆ.ಈ ಹರಾಜು ಪ್ರಕ್ರಿಯೆಯಲ್ಲಿ ದೇವರ ಮುಕ್ತಿ ಬಾವುಟ ಪಡೆಯಲು ಹಲವಾರು ಭಾಗಿ ಆಗಿದ್ದರು. ಬಳ್ಳಾರಿ, ರಾಯಚೂರು, ತುಮಕೂರು, ಕೊಪ್ಪಳ, ಗದಗ ಸೇರಿದಂತೆ ಅಕ್ಕಪಕ್ಕದ ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯದಿಂದಲೂ ಭಕ್ತರು ಜಾತ್ರೆಯಲ್ಲಿ ಭಾಗವಹಿಸಿ ಸ್ವಾಮಿಯ ದರ್ಶನ ಪಡೆದರು.ಜಾತ್ರೆ ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಪೊಲೀಸರು ಹದ್ದಿನ ಕಣ್ಣಿಟ್ಟಿದ್ದರು. ಈ ನಿಟ್ಟಿನಲ್ಲಿ ಸುಸುತ್ರವಾಗಿ ಜಾತ್ರೆ ನೇರವೇರಿತು. ಇನ್ನು ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಶಾಸಕರಾದ ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಜಿಲ್ಲಾಧಿಕಾರಿ ಟಿ. ವೆಂಕಟೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ, ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ ಉಪವಿಭಾಗಾಧಿಕಾರಿ ಕಾರ್ತೀಕ್ ದೇವಸ್ಥಾನ ಸಮಿತಿ ಪದಾಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ತಿಪ್ಪೇಶನ ಮುಕ್ತಿ ಬಾವುಟ 61 ಲಕ್ಷಕ್ಕೆ ಹರಾಜು

» **ಚಿತ್ರದುರ್ಗ**

ಮಧ್ಯ ಕರ್ನಾಟಕದ ಬುಡಕಟ್ಟು ಜನರ ಆರಾಧ್ಯದೈವ. ಎಂಬ ಖ್ಯಾತಿಯನ್ನು ಪಡೆದುಕೊಂಡಿರುವ ನಾಯಕನಹಟ್ಟಿ ತಿಪ್ಪೇರುದ್ರಸ್ವಾಮಿ ಜಾತ್ರಾ ಮಹೋತ್ಸವ ಸಂಭ್ರಮ ಸಡಗರದ ಜನಸಾಗರದಲ್ಲಿ ನಡುವೆ ಜರುಗಿತು.

ಜಿಲ್ಲೆಯಲ್ಲಿ ಬರದ ಕಾರ್ಮೋಡ ಆವರಿಸಿದ್ದರು ಸಹ ಲಕ್ಷಾಂತರ ಭಕ್ತರು ಜಾತ್ರೆಯಲ್ಲಿ ಭಾಗವಹಿಸಿ ಸಮೃದ್ಧ, ಮಳೆ ಮತ್ತು ಬೆಳೆ ನೀಡಲೆಂದು ಶ್ರೀ ಗುರು ತಿಪ್ಪೇರುದ್ರಸ್ವಾಮಿ ಕೈ ಮುಗಿದು ಪ್ರಾರ್ಥಿಸಿದರು.

ಪ್ರತಿ ವರ್ಷದಂತೆ ಈ ವರ್ಷ ಸಹ ಜಾತ್ರೆಯಲ್ಲಿ ಪ್ರಮುಖ ಆಕರ್ಷಣೆಯಾಗಿರುವ ಮುಕ್ತಿ ಭಾವುಟಕ್ಕೆ ಸಾಕಷ್ಟು ಪೈಪೋಟಿ ನಡೆಯಿತು. ಪ್ರತಿ ವರ್ಷವೂ ಮುಕ್ತಿ ಭಾವುಟವನ್ನು ಯಾರು, ಎಷ್ಟು ಮೊತ್ತಕ್ಕೆ ಹರಾಜಿನಲ್ಲಿ ಪಡೆದುಕೊಳ್ಳಬಹುದು ಎಂಬ ಕುತೂಹಲ ಭಕ್ತರಲ್ಲಿತ್ತು. ಅದರಂತೆ ಈ ಬಾರಿ ಈ ವರ್ಷ 2024ರಲ್ಲಿ ನಡೆದ ಶ್ರೀ ನಾಯಕನಹಟ್ಟಿ ತಿಪ್ಪೇರುದ್ರಸ್ವಾಮಿ ಮಾತ್ರೆಯ ಮುಕ್ತಿ ಭಾವಟ ಬರೋಬ್ಬರಿ 61 ಲಕ್ಷ ರೂ.ಗಳಿಗೆ ಹರಾಜಾಯಿತು.

ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ 61 ಲಕ್ಷ ರೂ.ಗಳಿಗೆ ಮುಕ್ತಿ ಭಾವುಟವನ್ನು ಹರಾಜಿನಲ್ಲಿ ಪಡೆದುಕೊಂಡಿದ್ದಾರೆ.ವಿಶೇಷವೆಂದರೆ ಕಳೆದ ವರ್ಷ ಕೂಡಾ ಸಚಿವ ಡಿ.ಸುಧಾಕರ್ 55 ಲಕ್ಷ ರೂ.ಗಳಿಗೆ ಮುಕ್ತಿ ಭಾವುಟವನ್ನು ಹರಾಜಿನಲ್ಲಿ ಪಡೆದುಕೊಂಡಿದ್ದರು.ಮುಕ್ತಿ ಭಾವುಟ ಹರಾಜಿನ ನಂತರ ನಾಯಕನಹಟ್ಟಿಯ ತೇರು ಬೀದಿಯಲ್ಲಿ ಶ್ರೀ ತಿಪ್ಪೇರುದ್ರಸ್ವಾಮಿಯ ಬೃಹತ್ ಗಾತ್ರದ ತೇರನ್ನು ಲಕ್ಷಾಂತರ ಭಕ್ತರು ಎಳೆದು ಪುನೀತರಾದರು. ಈ ವೇಳೆ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಸೇರಿ ಹಲವರು ಜಾತ್ರೆಯಲ್ಲಿ ಭಾಗವಹಿಸಿದ್ದರು.





| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



**ಫಾಸ್ಟ್ ನ್ಯೂಸ್**

## ದಾಖಲೆ ಇಲ್ಲದ ರೂ.20.35 ಲಕ್ಷ ವಶ




» **ಚಿತ್ರದುರ್ಗ**

ಚಿತ್ರದುರ್ಗ ನಗರದ ಪಿಳ್ಳೇಕೆರನಹಳ್ಳಿ ಚೆಕ್ ಪೋಸ್ಟ್ ಬಳಿ ಸೂಕ್ತ ದಾಖಲೆ ಇಲ್ಲದೇ ಕಾರಿನಲ್ಲಿ ಸಾಗಿಸುತ್ತಿದ್ದ ರೂ.20.35 ಲಕ್ಷ ಹಣವನ್ನು ಮಂಗಳವಾರ ವಶಪಡಿಸಿಕೊಳ್ಳಲಾಗಿದೆ. ತಾಲ್ಲೂಕಿನ ಭರಮಸಾಗರ ಗ್ರಾಮದ ಮನೋಜ್ ಕುಮಾರ್ ಎಂಬುವವರು ಹೊಸಪೇಟೆಯಿಂದ ಹಣವನ್ನು ಕಾರಿನಲ್ಲಿ ಗ್ರಾಮಕ್ಕೆ ಕೊಂಡಯ್ಯುತ್ತಿದ್ದರು. ಮಾದರಿ ನೀತಿ ಸಂಹಿತೆ ಹಿನ್ನಲೆಯಲ್ಲಿ ಸ್ಥಾಪಿಸಲಾಗಿರುವ ಪಿಳ್ಳೇಕೆರನಹಳ್ಳಿ ಚೆಕ್ ಪೊಸ್ಟ್‌ನಲ್ಲಿ ಎಸ್.ಎಸ್.ಟಿ ತಂಡ ತಪಾಸಣೆ ನಡೆಸುವ ವೇಳೆ ಕಾರಿನಲ್ಲಿ ನಗದು ಇರುವುದು ಪತ್ತೆಯಾಗಿದೆ. ಮನೋಜ್ ಕುಮಾರ್ ಅವರು ಹಣ ಹೊಂದಿದ್ದಕ್ಕೆ ಯಾವುದೇ ಸೂಕ್ತ ದಾಖಲೆ ಪ್ರಸುತ ಪಡಿಸದ ಕಾರಣ, ರೂ.20.35 ಲಕ್ಷ ನಗದನ್ನು ವಶಪಡಿಸಿಕೊಳ್ಳಲಾಗಿದೆ. ಪ್ರಕರಣವನ್ನು ಸಹ ದಾಖಲಿಸಲಾಗಿದೆ. ಹಣದ ಮೂಲ ಹಾಗೂ ಇನ್ನಿತರ ಮಾಹಿತಿಯ ತನಿಖೆಗಾಗಿ ಪ್ರಕರಣವನ್ನು ಆದಾಯ ತೆರಿಗೆ ಇಲಾಖೆ ವರ್ಗಾಯಿಸಲಾಗಿದೆ.

ಈ ಸಂದರ್ಭದಲ್ಲಿ ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ, ಗ್ರಾಮಾಂತರ ಠಾಣೆ ಪೊಲೀಸ್ ನಿರೀಕ್ಷಕ ಸುನೀಲ್ ಕುಮಾರ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಮತದಾರರಿಂದ ಉತ್ತಮ ಸ್ಪಂದನೆ: ಪ್ರಿಯಾಂಕಾ ಜಾರಕಿಹೊಳಿ



» **ಚಿಕ್ಕೋಡಿ**

ಲೋಕಸಭೆ ಕ್ಷೇತ್ರದಲ್ಲಿ ಮತದಾರರಿಂದ ಉತ್ತಮ ಪ್ರತಿಕ್ರಿಯೆ ದೊರೆಯುತ್ತಿದೆ ಎಂದು ಕಾಂಗ್ರೆಸ್ ಅಭ್ಯರ್ಥಿ ಹಾಗೂ ಯುವ ನಾಯಕಿ ಪ್ರಿಯಂಕಾ ಸತೀಶ ಜಾರಕಿಹೊಳಿ ಹೇಳಿದರು. ಚಿಕ್ಕೋಡಿ ಎಂ.ಕೆ. ಕವಟಗಿಮಠ ನಗರದಲ್ಲಿ ಇರುವ ಜಾರಕಿಹೊಳಿ ನಿವಾಸದಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಯುವಕ– ಯುವತಿಯರು ರಾಜಕೀಯ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷ ಹೆಚ್ಚಿನ ಪ್ರಾಧಾನ್ಯತೆ ನೀಡಿದ್ದು. ಮತದಾರರಲ್ಲಿ ಅರ್ಧಕ್ಕಿಂತ ಹೆಚ್ಚು ಜನರು ಯುವಕರಿಂದ ದೇಶ ಕೂಡಿದೆ. ಯುವಕರಿಂದ ದೇಶದಲ್ಲಿ ಪ್ರಗತಿಯಾಗಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಪಕ್ಷ ನನಗೆ ಟಿಕೆಟ್ ನೀಡಿದೆ ಎಂದರು. ತಂದೆ ಸತೀಶ ಜಾರಕಿಹೊಳಿ ಮಾಡಿರುವ ಅಭಿವೃದ್ಧಿ ಕಾರ್ಯಗಳಂತೆ ನಾನು ಚಿಕ್ಕೋಡಿ ಲೋಕಸಭೆ ಕ್ಷೇತ್ರದಲ್ಲಿ ಅಭಿವೃದ್ಧಿ ಮಾಡುವ ಗುರಿ ಇದೆ ಎಂದರು. ಯುವಕರು ರಾಜಕೀಯ ಕ್ಷೇತ್ರದಲ್ಲಿ ಮುಂದೆ ಬರಬೇಕು ಮತ್ತು ಬದಲಾವಣೆ ದೃಷ್ಟಿಯಿಂದ ಯುವಕರನ್ನು ಆಯ್ಕೆ ಮಾಡಬೇಕು ಎಂದು ಪ್ರಿಯಾಂಕಾ ಜಾರಕಿಹೊಳಿ ಹೇಳಿದರು. ಈ ಸಂದರ್ಭದಲ್ಲಿ ಯುವ ಮುಖಂಡ ರಾಹುಲ್ ಜಾರಕಿಹೊಳಿ. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು ಮತ್ತು ಬುಡಾ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ. ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಮಹಾವೀರ ಮೋಹಿತೆ ಇದ್ದರು.

## ಲೋಕಸಭಾ ಚುನಾವಣೆಗೆ ವೀಕ್ಷಕರ ನೇಮಕ

» **ಚಿತ್ರದುರ್ಗ**

ಭಾರತ ಚುನಾವಣಾ ಆಯೋಗವು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆಗೆ ಸಂಬಂಧಿಸಿದಂತೆ ಮೂವರು ಹಿರಿಯ ಶ್ರೇಣಿ ಅಧಿಕಾರಿಗಳನ್ನು ಚುನಾವಣಾ ವೀಕ್ಷಕರನ್ನಾಗಿ ನೇಮಿಸಿ ಆದೇಶ ಹೊರಡಿಸಿದೆ. ಈ ಚುನಾವಣೆಯ ಸಾಮಾನ್ಯ ವೀಕ್ಷಕರಾಗಿ ಹಿರಿಯ ಐಎಎಸ್ ಅಧಿಕಾರಿ ಮನೋಹರ್ ಮರಾಂಡಿ, ಚುನಾವಣಾ ವೆಚ್ಚ ವೀಕ್ಷಕರಾಗಿ ಪ್ರಜಕ್ತ ಪಿ.ಠಾಕೂರ್ ಹಾಗೂ ಕಾನೂನು ಸುವ್ಯವಸ್ಥೆ(ಪೊಲೀಸ್)ಯ ವೀಕ್ಷಕರಾಗಿ ನಜ್ಮಲ್ ಹೊಡ ಅವರನ್ನು ನೇಮಿಸಿ ಆದೇಶ ಹೊರಡಿಸಿದೆ. ಈ ಎಲ್ಲ ವೀಕ್ಷಕರಿಗೆ ಸಹಾಯಕ ಅಧಿಕಾರಿಗಳಾಗಿ ವಿವಿಧ ಇಲಾಖೆಗಳ ಜವಾಬ್ದಾರಿಯುತ ಹಿರಿಯ ಅಧಿಕಾರಿಗಳನ್ನು ನೇಮಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ತಿಳಿಸಿದ್ದಾರೆ.

## ವರ್ತಕರು ಹಾಗೂ ಟ್ರಾನ್ಸ್ ಪೋರ್ಟ್ ಮಾಲಿಕರೊಂದಿಗೆ ಸಭೆ,

# ಜಿಎಸ್‌ಟಿ ನಿಯಮದನ್ವಯ ವಹಿವಾಟು ನಡೆಸಿ

» **ದಾವಣಗೆರೆ**

ಲೋಕಸಭಾ ಚುನಾವಣೆ ನಡೆಯುತ್ತಿದ್ದು ನೀತಿ ಸಂಹಿತೆ ಜಾರಿಯಲ್ಲಿದೆ. ಜವಳಿ, ಚಿನ್ನಬೆಳ್ಳಿ, ಕಿಚನ್ ವಸ್ತುಗಳ ವ್ಯಾಪಾರಿಗಳು ಸೇರಿದಂತೆ ಟ್ರಾನ್ಸ್ ಪೋರ್ಟ್ ಮಾಲಿಕರು ನಿಯಮಬದ್ದವಾಗಿ ವಹಿವಾಟು ನಡೆಸುವ ಮೂಲಕ ಚುನಾವಣಾ ನೀತಿ ಸಂಹಿತೆ ಪಾಲನೆ ಮಾಡುವ ಮೂಲಕ ಮುಕ್ತ, ನ್ಯಾಯಸಮ್ಮತ ಹಾಗೂ ಪಾರದರ್ಶಕವಾದ ಚುನಾವಣೆ ನಡೆಸಲು ಎಲ್ಲಾ ಸಹಕಾರ ನೀಡಬೇಕೆಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯಲ್ಲಿನ ಜವಳಿ, ಚಿನ್ನಬೆಳ್ಳಿ, ಸ್ಟೀಲ್ ಅಂಗಡಿ ವರ್ತಕರು, ಪೆಟ್ರೋಲ್ ಬಂಕ್, ಸಮುದಾಯ ಭವನ, ಹೋಟೆಲ್ ಮಾಲಿಕರು ಮತ್ತು ಸರಕು ಸಾಗಣೆ ವಾಹನಗಳ ಮಾಲಿಕರು ಹಾಗೂ ಮುದ್ರಣಾಲಯದ ಮಾಲಿಕರೊಂದಿಗೆ ನಡೆಸಿದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಚುನಾವಣಾ ಸಂದರ್ಭದಲ್ಲಿ ಜನರಿಗೆ ಉಚಿತ ಕೊಡುಗೆ ನೀಡಲು ವಸ್ತುಗಳನ್ನು ಖರೀದಿ ಮಾಡುವ ಸಂಭವವಿರುತ್ತದೆ. ಸೀರೆ ಹಂಚಿಕೆ, ಕಿಚನ್ ವಸ್ತುಗಳ ಹಂಚಿಕೆ, ಬೆಳ್ಳಿ ಬಂಗಾರದ ಉಡುಗೊರೆ ನೀಡುವ ಸಂಭವಿರುತ್ತದೆ. ಮಾಲಿಕರು ಯಾರು ಒಂದೇ ತರಹದ ವಸ್ತುಗಳನ್ನು ಖರೀದಿಸುವರು ಅಂತಹವರ ವಿವರವನ್ನು ನೀಡಬೇಕಾಗುತ್ತದೆ.

ಯಾವುದೇ ವಸ್ತುಗಳನ್ನು ಖರೀದಿಸಿದರೂ ಜಿ.ಎಸ್.ಟಿ. ಬಿಲ್ ನೀಡುವುದು ಕಡ್ಡಾಯವಾಗಿರುತ್ತದೆ. ಯಾವುದೇ ಮದುವೆಯ ಸಮಾರಂಭಕ್ಕೆ ಜವಳಿ ಖರೀದಿಸಿದಲ್ಲಿ ಅದಕ್ಕೆ ಸಂಬಂಧಿಸಿದ ಜಿ.ಎಸ್.ಟಿ. ಬಿಲ್ ಇಟ್ಟುಕೊಳ್ಳಬೇಕಾಗುತ್ತದೆ. ಮತ್ತು ಅಂಗಡಿ ಮಾಲಿಕರು ಆಗಮಿಸುವ ಗ್ರಾಹಕರಿಗೆ ಆನ್‌ಲೈನ್ ವ್ಯವಹಾರ ಮಾಡಲು ತಿಳಿಸಬೇಕು. ಯಾವುದೇ ಅಂಗಡಿಗೆ ವಾಣಿಜ್ಯ ತೆರಿಗೆ ಅಧಿಕಾರಿಗಳು ಬಂದಾಗ ಎಲ್ಲಾ ದಾಖಲೆಗಳನ್ನು ಇಟ್ಟುಕೊಂಡು ಪರಿಶೀಲನೆಗೆ ಸಹಕಾರ ನೀಡಬೇಕಾಗುತ್ತದೆ. ನಿಯಮಬದ್ದವಾಗಿ ವ್ಯವಹಾರ ಮಾಡಲು ಯಾವುದೇ ಅಭ್ಯಂತರ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು.



ನಗದು ಸಾಗಣೆಗೆ ಅನುಮತಿ ಪಡೆಯಿರಿ; ಅಂಗಡಿಯಲ್ಲಿ ವ್ಯಾಪಾರ ಮಾಡಿದ ವೇಳೆ ಸ್ವೀಕರಿಸಲಾದ ನಗದನ್ನು ಬ್ಯಾಂಕ್‌ಗೆ ಹೋಗಿ ಜಮಾ ಮಾಡಲು ಹೋಗುವಾಗ ನಗದು ವಶಕ್ಕೆ ಪಡೆಯುತ್ತಾರೆ ಎಂದು ವರ್ತಕರು ಪ್ರಸ್ತಾಪಿಸಿದರು. ಇದಕ್ಕೆ ಜಿಲ್ಲಾಧಿಕಾರಿಯವರು ವಹಿವಾಟು ನಡೆಸುತ್ತಿರುವ ಬಗ್ಗೆ ಮತ್ತು ಹಣವನ್ನು ಸಾಗಣೆ ಮಾಡುತ್ತಿರುವ ಬಗ್ಗೆ ದಾಖಲೆಗಳ ಸಮೇತ ಸಂಬಂಧಿಸಿದ ಆಯಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳಿಗೆ ಸಲ್ಲಿಸಿ ವಹಿವಾಟು ನಡೆಸಬಹುದು. ಈಗಾಗಲೇ ಧರ್ಮಸ್ಥಳ ಸಂಘದವರು ಹಣಕಾಸಿನ ವಹಿವಾಟು ನಡೆಸುತ್ತಿರುವ ಮತ್ತು ಸಂಗ್ರಹಿಸಲಾದ ನಗದನ್ನು ಬ್ಯಾಂಕ್‌ಗೆ ಕೊಂಡೊಯ್ದು ಜಮಾ ಮಾಡಲು ಅನುಮತಿ ನೀಡಲಾಗಿದೆ. ಅದೇ ರೀತಿ ಯಾವುದೇ ಟ್ರೇಡ್‌ನವರು ನಗದು ಸಾಗಣೆ ಬಗ್ಗೆ ಸೂಕ್ತ ದಾಖಲೆಗಳನ್ನಿಟ್ಟುಕೊಳ್ಳಬೇಕಾಗುತ್ತದೆ. ವಶಕ್ಕೆ ಪಡೆದ ಹಣದ ಪುನರ್ ಪರಿಶೀಲನೆ ನಡೆಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಿಡ್ರೆಸ್ಸೆಲ್ ಸಮಿತಿ ಕಾರ್ಯನಿರ್ವಹಿಸುತ್ತಿದೆ ಎಂದರು.

ಚಿನ್ನ ಬೆಳ್ಳಿ ವ್ಯಾಪಾರಿಗಳು ವಿವರ ಸಲ್ಲಿಸಿ; ಚಿನ್ನ ಬೆಳ್ಳಿ ವ್ಯಾಪಾರಿಗಳು ಸಣ್ಣ ಸಣ್ಣ ವಸ್ತುಗಳನ್ನು ಹೆಚ್ಚಾಗಿ ಖರೀದಿ ಮಾಡುವವರ ವಿವರವನ್ನು ನೀಡಬೇಕು. ಯಾವುದೇ ಖರೀದಿ ಮಾಡಿದ್ದರೂ ಸಹ ಜಿ.ಎಸ್.ಟಿ. ಬಿಲ್ ನೀಡುವುದು ಕಡ್ಡಾಯವಾಗಿದೆ.

ಈ ವೇಳೆ ವರ್ತಕರು ಮಾತನಾಡಿ ಆಭರಣ ತಯಾರಿಸಲು ನೀಡಿದ್ದು ವಾಪಸ್ ಅಂಗಡಿಗೆ ನೀಡುವಾಗ ವಶಕ್ಕೆ ಪಡೆದು ಸೀಜ್ ಮಾಡಲಾಗಿತ್ತು, ಅದನ್ನು ಮೂರು ತಿಂಗಳ ನಂತರ ವಾಪಸ್ ನೀಡಲಾಯಿತು. ಇದರಿಂದ ಸಕಾಲದಲ್ಲಿ ಗ್ರಾಹಕರಿಗೆ ಆಭರಣ ನೀಡಲು ಸಾಧ್ಯವಾಗದೆ ಸಮಸ್ಯೆ ಎದುರಿಸಬೇಕಾಯಿತು ಎಂದಾಗ ಆಭರಣ ಸಿದ್ದಪಡಿಸಲು ನೀಡುವಾಗಲೂ ಅದಕ್ಕೆ ಸಂಬಂಧಿಸಿದ ರಸೀದಿಯನ್ನು ನೀಡಬೇಕಾಗುತ್ತದೆ. ರಸೀದಿ ನೀಡಿದಲ್ಲಿ ಯಾರು ಸಹ ವಶಕ್ಕೆ ಪಡೆಯುವುದಿಲ್ಲ ಎಂದು ಸಷ್ಟಪಡಿಸಿದರು.

ಕೂಪನ್ ವಹಿವಾಟು ನಡೆಸುವಂತಿಲ್ಲ; ಯಾವುದೇ ಹೋಟೆಲ್, ಅಂಗಡಿಗಳಲ್ಲಿ ಕೂಪನ್ ಮೂಲಕ ವಹಿವಾಟು ನಡೆಸುವಂತಿಲ್ಲ.ಯಾವುದೇ ಹೋಟೆಲ್‌ನಲ್ಲಿ ಯಾರು ವಾಸ್ತವ್ಯ ಹೂಡುವರು ಅವರೇ ಬಿಲ್ ಪಾವತಿಸಬೇಕು. ಮತ್ತು ಯಾವುದೇ ಹೋಟೆಲ್, ಅಂಗಡಿ, ಪೆಟ್ರೋಲ್ ಬಂಕ್‌ಗಳಲ್ಲಿ ಕೂಪನ್ ಆಧರಿಸಿ ಯಾವುದೇ ವಸ್ತುಗಳು, ಉಪಹಾರ, ಊಟ ನೀಡುವಂತಿಲ್ಲ, ಮತ್ತು ಸಮುದಾಯ ಭವನಗಳಲ್ಲಿ ರಾಜಕೀಯ ಉದ್ದೇಶಕ್ಕೆ ನೀಡುವಾಗ ಕಡ್ಡಾಯವಾಗಿ ಅನುಮತಿ ಪಡೆಯಬೇಕಾಗುತ್ತದೆ ಎಂದರು.

ಮುದ್ರಣ ಮಾಲಿಕರು ಡಿಕ್ಲರೇಷನ್ ಸಲ್ಲಿಕೆ ಕಡ್ಡಾಯ; ಕರಪತ್ರ ಮುದ್ರಣ ಮಾಲಿಕರು ನಿಯಮ127ಎಅನ್ವಯಯಾವುದೇಕರಪತ್ರ ಮುದ್ರಣ ಮಾಡಿದ 3 ದಿನಗಳೊಳಗಾಗಿ ಜಿಲ್ಲಾ ದಂಡಾಧಿಕಾರಿಗೆ ಮುದ್ರಿತ ಪ್ರತಿಗಳೊಂದಿಗೆ ಅಪೆಂಡಿಕ್ಸ್.ಬಿ ಅನ್ವಯ ಸಲ್ಲಿಸಬೇಕು. ಆಯಾ ತಾಲ್ಲೂಕುಗಳಲ್ಲಿ ಸಹಾಯಕ ಚುನಾವಣಾಧಿಕಾರಿಗಳಿದ್ದು ಅಲ್ಲಿಯು ಸಲ್ಲಿಸಬಹುದಾಗಿದೆ ಎಂದ ಅವರು ಮತದಾನ ಮುಕ್ತಾಯದ 48 ಗಂಟೆಗಳ ಮುಂಚಿನ ಅವಧಿಯಲ್ಲಿ ಮುದ್ರಣ ಮಾಧ್ಯಮದಲ್ಲಿ ಜಾಹಿರಾತು ನೀಡಲು ಅನುಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ ಎಂದರು.

ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಮಾತನಾಡಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ವ್ಯಾಪಾರ ವಹಿವಾಟಿನಲ್ಲಿ ಯಾವುದೇ ಉಲ್ಲಂಘನೆಯಾಗಬಾರದು. ಗೋಡೌನ್‌ಗಳಲ್ಲಿ ದಾಸ್ತಾನಿರುವ ವಸ್ತುಗಳಿಗೂ ನಿಮ್ಮಲ್ಲಿರುವ ಬಿಲ್‌ಗಳಿಗೂ ತಾಳೆಯಾಗುವಂತಿರಬೇಕು. ಕೆಲವು ಸಂದರ್ಭದಲ್ಲಿ ದಾಸ್ತಾನು ಮಳಿಗೆ ಪರಿಶೀಲನೆ ಮಾಡುವ ಸಂದರ್ಭ ಬಂದಾಗ ದಾಖಲೆಗಳನ್ನಿಟ್ಟುಕೊಳ್ಳಬೇಕಾಗುತ್ತದೆ.

ರೂ.50 ಸಾವಿರಕ್ಕೂ ಹೆಚ್ಚು ನಗದು ತೆಗೆದುಕೊಂಡು ಹೋಗುವಂತಿಲ್ಲ. ಹೋದರೆ ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು ಇಟ್ಟುಕೊಳ್ಳಬೇಕಾಗುತ್ತದೆ. ಈ ವೇಳೆ ವರ್ತಕರು ಮಾತನಾಡಿ ವ್ಯಾಪಾರ ಮಾಡಲು ಬೇರೆ ಕಡೆ ಹೋದಾಗ ನಗದು ತೆಗೆದುಕೊಂಡು ಹೋಗಬೇಕಾಗುತ್ತದೆ ಎಂದಾಗ ಈ ಬಗ್ಗೆ ಸಹಾಯಕ ಚುನಾವಣಾಧಿಕಾರಿಗಳಿಗೆ ವಿವರವಾದ ಮಾಹಿತಿ ನೀಡಬಹುದಾಗಿದೆ ಎಂದರು.

ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಗಳು ಜಿ.ಎಸ್.ಟಿ. ನಿಯಮಗಳ ಬಗ್ಗೆ ವಿವರ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್.ಬಳ್ಳಾರಿ, ಹೆಚ್ಚುವರಿ ರಕ್ಷಣಾಧಿಕಾರಿ ವಿಜಯಕುಮಾರ ಎಂ.ಸಂತೋಷ್, ಚುನಾವಣಾ ವೆಚ್ಚದ ಮೇಲ್ವಿಚಾರಣಾ ಸಮಿತಿ ನೋಡಲ್ ಅಧಿಕಾರಿ ಗಿರೀಶ್.ಹೆಚ್, ವಾಣಿಜ್ಯ ತೆರಿಗೆ ಇಲಾಖೆ ಸಹಾಯಕ ಆಯುಕ್ತ ಮಂಜುನಾಥ್ ಮತ್ತು ಜವಳಿ ಅಂಗಡಿ ಮಾಲಿಕರು, ಬೆಳ್ಳಿ, ಬಂಗಾರದ ಅಂಗಡಿ, ಪೆಟ್ರೋಲ್ ಬಂಕ್, ಮುದ್ರಣಾಲಯದ ಮಾಲಿಕರು, ಟ್ರಾನ್ಸ್ ಪೋರ್ಟ್ ಮಾಲಿಕರು ಉಪಸ್ಥಿತರಿದ್ದರು.



ದಾವಣಗೆರೆ ನಗರದ ರಾಂ ಅಂಡ್ಕೋ ವೃತ್ತದಲ್ಲಿ ಆಯೋಜಿಸಿದ್ದ 25ನೇ ವರ್ಷದ ಹೋಳಿ ಸಂಭ್ರಮದಲ್ಲಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗಾಯಿತ್ರಿ ಸಿದ್ದೇಶ್ವರ ಭಾಗಿಯಾಗಿ ಸರ್ವರಿಗೂ ಶುಭಾಶಯ ಕೋರಿದರು.

## ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಗೆ 200 ಸೀಟು ಬರಬಹುದು

» **ಹುಬ್ಬಳ್ಳಿ**



ಕಳೆದ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಶೇ.37ರಷ್ಟು ಮತಗಳನ್ನು ಪಡೆದಿತ್ತು. ಈ ಬಾರಿ ಅದು ಶೇ.29ರಷ್ಟು ಆಗಬಹುದು. ದೇಶಾದ್ಯಂತ ಬಿಜೆಪಿಗೆ 200 ಸೀಟುಗಳು ಸಿಗಬಹುದು ಎಂದು ಸಮೀಕ್ಷಾ ವರದಿಗಳೇ ಬಹಿರಂಗಪಡಿಸಿವೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ತಿಳಿಸಿದ್ದಾರೆ.ಸೋಮವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಲೋಕಸಭಾ ಚುನಾವಣೆಯು ಕಳೆದ 10 ವರ್ಷಗಳಲ್ಲಿ ನರೇಂದ್ರ ಮೋದಿ ನೇತೃತ್ವದ ಸರಕಾರ ಮಾಡಿರುವ ಅಭಿವೃದ್ಧಿ ಆಧಾರದ ಮೇಲೆ ನಡೆಯಬೇಕು. ಆದರೆ, ಆರೋಪ–ಪ್ರತ್ಯಾರೋಪಗಳ ಮೇಲೆ ಚುನಾವಣೆ ನಡೆಯುವಂತಾಗಿರುವುದು ದುರ್ದೈವ ಎಂದರು.

ತನ್ನನ್ನು ವಿಶ್ವಗುರು ಎಂದು ಕರೆಸಿಕೊಳ್ಳುವ ನರೇಂದ್ರ ಮೋದಿ ಆಡಳಿತಾವಧಿಯಲ್ಲೆ ದೊಡ್ಡ ದೊಡ್ಡ ಕಂಪೆನಿಗಳು ಮುಚ್ಚಿ ಹೋಗಿ, ನಿರುದ್ಯೋಗ ಸಮಸ್ಯೆ ಹೆಚ್ಚಾಗಿದೆ. ಎಲ್ಲಿ ನೋಡಿದರೂ ವಿಶ್ವಗುರುವಿನ ಜಾಹಿರಾತುಗಳು ರಾರಾಜಿಸುತ್ತಿವೆ. 10 ವರ್ಷಗಳ ಕಾಲ ಇವರು ಅಭಿವೃದ್ಧಿ ಮಾಡಿದ್ದರೆ ಇಷ್ಟೊಂದು ಪ್ರಚಾರದ ಅಗತ್ಯವಿರುತ್ತಿತ್ತೇ ಎಂದು ಸಂತೋಷ್ ಲಾಡ್ ಪ್ರಶ್ನಿಸಿದರು.

ರೆಡ್ಡಿ ಬಿಜೆಪಿ ಸೇರ್ಪಡೆಗೆ ವ್ಯಂಗ್ಯ: ಶಾಸಕ ಗಾಲಿ ಜನಾರ್ದನ ರೆಡ್ಡಿ ತಮ್ಮ ಕಲ್ಯಾಣ ರಾಜ್ಯ ಪ್ರಗತಿ ಪಕ್ಷವನ್ನು ಬಿಜೆಪಿಯಲ್ಲಿ ವಿಲೀನಗೊಳಿಸಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಈ ಚುನಾವಣೆಯಲ್ಲಿ ಬಿಜೆಪಿಗೆ ಕಡಿಮೆ ಸ್ಥಾನಗಳು ಬರುತ್ತವೆ ಎಂಬುದು ಖಚಿತವಾಗಿದೆ. ಆದುದರಿಂದಲೇ, ಸಣ್ಣಪುಟ್ಟ ಪ್ರಾದೇಶಿಕ ಪಕ್ಷಗಳನ್ನೆಲ್ಲ ವಿಲೀನಗೊಳಿಸುವ ಕೆಲಸ ಮಾಡುತ್ತಿದ್ದಾರೆ ಎಂದು ವ್ಯಂಗ್ಯವಾಡಿದರು.

ಬಿಜೆಪಿಗೆ ಸೇರುತ್ತಿದ್ದಂತೆ ಭ್ರಷ್ಟಾಚಾರ, ಅಕ್ರಮಗಳ ಆರೋಪಗಳನ್ನು ಎದುರಿಸುತ್ತಿರುವವರೆಲ್ಲ 'ವಾಷಿಂಗ್ ಪೌಡರ್ ನಿರ್ಮಾ' ಎಂದು ಪರಿಶುದ್ಧರಾಗುತ್ತಾರೆ. ಅದೇ ರೀತಿ, ಈಗ ಜನಾರ್ದನ ರೆಡ್ಡಿ ಬಿಜೆಪಿ ಸೇರಿದ್ದಾರೆ. ಪ್ರಧಾನಿ ಮೋದಿ 'ನಾ ಖಾವೂಂಗ, ನಾ ಖಾನೆ ದೂಂಗ' ಎನ್ನುತ್ತಿದ್ದರು. ಈಗ ನೋಡಿದರೆ ಭ್ರಷ್ಟಾಚಾರದ ಆರೋಪ ಹೊತ್ತಿರುವ ಜನಾರ್ದನ ರೆಡ್ಡಿಯನ್ನು ತಮ್ಮ ಪಕ್ಷಕ್ಕೆ ಸೇರಿಸಿಕೊಂಡಿದ್ದಾರೆ

## ವನ್ಯಜೀವಿ ಅಂಗಾಂಗಗಳ ಟ್ರೋಫಿ ಸರಂಡರ್ ಮಾಡಲು ಅವಕಾಶ

**ದಾವಣಗೆರೆ** : ಸಾರ್ವಜನಿಕರು ತಮ್ಮಲ್ಲಿರುವ ಅಘೋಷಿತ ವನ್ಯಜೀವಿ, ಪ್ರಾಣಿಗಳ ಅಂಗಾಂಗಗಳ ಪದಾರ್ಥಗಳು, ಟ್ರೋಫಿಗಳು ಮತ್ತು ಸಂಸ್ಕರಿಸಿದ ಟ್ರೋಫಿಗಳನ್ನು ಅಧ್ಯರ್ಪಿಸಲು ಸಂಬಂಧಪಟ್ಟ ಅರಣ್ಯ ಇಲಾಖೆ, ಎಸಿಎಫ್, ಡಿಸಿಎಫ್ ಕಚೇರಿಗೆ ನೀಡಲು 90 ದಿನಗಳ ಕಾಲಾವಕಾಶ ನೀಡಲಾಗಿದೆ, ಅಧ್ಯರ್ಪಿಸಲು ಏ.11 ರಂದು ಕೊನೆಯ ದಿನವಾಗಿದ್ದು, ದಾವಣಗೆರೆ ಜಿಲ್ಲೆಯ ಸಾರ್ವಜನಿಕರು ತಮ್ಮಲ್ಲಿರುವ ವನ್ಯಜೀವಿ ಅಂಗಾಗಳಾದ ಹುಲಿಉಗುರು, ಚಿರತೆಉಗುರು, ಆನೆದಂತ, ಜಿಂಕೆಕೊಂಬು, ವನ್ಯಪ್ರಾಣಿಗಳ ಚರ್ಮ, ವನ್ಯಜೀವಿ ವಸ್ತುಗಳು ಸೇರಿದಂತೆ ಇನ್ನಿತರೆ ವಸ್ತುಗಳನ್ನು ಹೊಂದಿದ್ದರೆ. ಅಧ್ಯರ್ಪಿಸಬೇಕು. ಕಚೇರಿಗೆ ಸಲ್ಲಿಸುವ ಮೊದಲು 100 ರೂಪಾಯಿಗಳ ಸ್ಟಾಂಪ್ ಪೇಪರ್‌ನಲ್ಲಿ ನೋಟರಿ ಮಾಡಿರಬೇಕು ಮತ್ತು ನೋಟರಿಗೊಂಡ ಅಫಿಡವಿಟನಲ್ಲಿ ಅಧ್ಯರ್ಪಿಸುತ್ತಿರುವ ವನ್ಯಜೀವಿ ಅಂಗಾಂಗ, ಟ್ರೋಫಿಯನ್ನು ಅರ್ಜಿದಾರರು ಪಡೆದ ವಿಧ ಮತ್ತು ವರ್ಷದ ಬಗ್ಗೆ ಸ್ಪಷ್ಟವಾಗಿ ನಮೂದಿಸಿ ದೃಢೀಕರಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ದಾವಣಗೆರೆ ಪ್ರಾದೇಶಿಕ ವಲಯ ಕಚೇರಿ, ಮೊ. ನಂ:9481991703, ಜಗಳೂರು,ಮೊ. ನಂ:9481991705, ಹೊನ್ನಾಳಿ ಪ್ರಾದೇಶಿಕ ವಲಯ ಕಚೇರಿ, ಮೊ. ನಂ:9481991704, ಹೊಸಕೆರೆ ರಂಗಯ್ಯನದುರ್ಗ ವನ್ಯಜೀವಿ ವಲಯ, ಮೊ. ನಂ:948199170 ಸಂಪರ್ಕಿಸಬಹುದು.

**ಪ್ರಮುಖ ಸುದ್ದಿ**

# ದಿನಪತ್ರಿಕೆಗಳ ಬೇಡಿಕೆ ಈಡೇರಿಕೆಗೆ ಸರ್ಕಾರ ಗಮನ ಹರಿಸಲಿ

» **ದಾವಣಗೆರೆ**

ಜಿಲ್ಲಾ ಮತ್ತು ಪ್ರಾದೇಶಿಕ ದಿನಪತ್ರಿಕೆಗಳ ಹಾಲಿ ಜಾಹೀರಾತು ದರಕ್ಕಿಂತ ಶೇ.12ರಷ್ಟು ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಸರ್ಕಾರ ಗಮನ ಹರಿಸಬೇಕು ಎಂದು ಕರ್ನಾಟಕ ಕಾರ್ಯ ನಿರತ ದಿನಪತ್ರಿಕೆಗಳ ಸಂಘದ ರಾಜ್ಯಾಧ್ಯಕ್ಷ ಎ.ಸಿ.ತಿಪ್ಪೇಸ್ವಾಮಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ 503 ದಿನ ಪತ್ರಿಕೆ ಹಾಗೂ ಪ್ರಾದೇಶಿಕ ಪತ್ರಿಕೆಗಳಿವೆ. ಹಲವಾರು ಸಮಸ್ಯೆ ಇತ್ಯರ್ಥದ ಜೊತೆಗೆ ಸರ್ಕಾರದ ಸೌಲಭ್ಯಗಳನ್ನು ಪಡೆಯಲು ಜ.9ರಂದು ಸಂಘವನ್ನು ಸ್ಥಾಪಿಸಲಾಗಿದೆ. ದಾವಣಗೆರೆ ಜಿಲ್ಲಾ ಸಂಘದ ನೂತನ ಅಧ್ಯಕ್ಷರಾಗಿ ಆರ್.ರವಿ, ಪ್ರಧಾನ ಕಾರ್ಯದರ್ಶಿಯಾಗಿ ಜೆ.ಎಸ್.ವೀರೇಶ್, ಉಪಾಧ್ಯಕ್ಷರಾಗಿ ಬಿ.ಎನ್.ಮಲ್ಲೇಶ್,




ಕೆ.ಏಕಾಂತಪ್ಪ, ಕೆ.ಚಂದ್ರಣ್ಣ, ಎ.ಫಕೃದ್ದೀನ್, ಕೆ.ಉಮೇಶ್, ಮಲ್ಲಿಕಾರ್ಜುನ ಕಬ್ಬೂರು, ಖಜಾಂಚಿಯಾಗಿ ಕುಣೆಬೆಳಕೆರೆ ಸುರೇಶ್ ಅವರನ್ನು ನೇಮಕ ಮಾಡಲಾಗಿದೆ ಎಂದು ತಿಳಿಸಿದರು.

ಪ್ರತಿ ಎರಡು ವರ್ಷಕ್ಕೊಮ್ಮೆ ಜಾಹೀರಾತು ದರವನ್ನು ಶೇ.12ರಷ್ಟು ಹೆಚ್ಚು ಮಾಡಬೇಕು. ಆದರೆ, ಈವರೆಗೆ ಆಗಿಲ್ಲ. ಕೂಡಲೇ ಜಾಹೀರಾತು ದರ ಹೆಚ್ಚಳ ಮಾಡಬೇಕು ಎಂದು ಒತ್ತಾಯಿಸಿ ಮನವಿ ಸಲ್ಲಿಸಲಾಗಿದ್ದು, ಸರ್ಕಾರ ಕೂಡಲೇ ಜಾಹೀರಾತು ದರ ಹೆಚ್ಚಳ ಹಾಗೂ ಪಾರದರ್ಶಕವಾಗಿ ಜಾಹೀರಾತು ನೀತಿ ಜಾರಿಗೆ ತರಬೇಕು. ವಾರ್ತಾ ಇಲಾಖೆಯ ಮೂಲಕವೇ ಜಾಹೀರಾತು ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿ ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದು ಎಂದು ತಿಳಿಸಿದರು.

ಲೋಕಸಭಾ ಚುನಾವಣೆ ನಂತರ ರಾಜ್ಯ ಸರ್ಕಾರ ಪಾರದರ್ಶಕವಾದ ಜಾಹೀರಾತು, ಟೆಂಡರ್ ಜಾಹೀರಾತು ನೀಡುವ ಮೂಲಕ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ಉಸಿರಾಡುವ ಅವಕಾಶವನ್ನು ನೀಡಬೇಕು.ದಾವಣಗೆರೆ ಜಿಲ್ಲೆಯಲ್ಲಿ ಗ್ರಾಮ ಪಂಚಾಯತ್ ಮೂಲಕ ಕೈಗೊಳ್ಳುವ ಯಾವುದೇ ಟೆಂಡರ್ ಗಳ ಜಾಹೀರಾತು ನೀಡಿಲ್ಲ ದಿರುವುದನ್ನು ನೋಡಿದರೆ ಕಾಮಗಾರಿ ನಡೆದೇ ಇಲ್ಲ ಎಂದೆನಿಸುತ್ತದೆ. ಹಾಗಾಗಿ ಮುಂದಿನ ದಿನಗಳಲ್ಲಿ ಜಿಲ್ಲಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ನಿಯೋಗದ ಮೂಲಕ ಭೇಟಿ ಮಾಡಿ ತನಿಖೆ ನಡೆಸಬೇಕು ಎಂದು ಒತ್ತಾಯಿಸಿ ಮನವಿ ಮಾಡಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಜಿಲ್ಲಾಧ್ಯಕ್ಷ ಆರ್.ರವಿ, ಪ್ರಧಾನ ಕಾರ್ಯದರ್ಶಿ ಜೆ.ಎಸ್.ವೀರೇಶ್, ಸುಧಾಕರ್, ಕುಣೆಬೆಳಕೆರೆ ಸುರೇಶ್ ಇತರರು ಇದ್ದರು.

## ಫಾಸ್ಟ್ ನ್ಯೂಸ್

### ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಅಧ್ಯಕ್ಷರಾಗಿ ಜಾಲಿಮಂಜು ನೇಮಕ

» **ಚಳ್ಳಕೆರೆ**



ತಾಲ್ಲೂಕಿನ ಚನ್ನಮ್ಮನಾಗತಿಹಳ್ಳಿಯ ಜಾಲಿಮಂಜು ಇವರನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ತಾಲ್ಲೂಕು ಅಧ್ಯಕ್ಷರನ್ನಾಗಿ ನೇಮಿಸಿ ರಾಜ್ಯಾಧ್ಯಕ್ಷ ಬಂಗ್ಲೆ ಮಲ್ಲಿಕಾರ್ಜುನ್ ಆದೇಶಿಸಿದ್ದಾರೆ.

ಈ ಬಗ್ಗೆ ಮಾಹಿತಿ ನೀಡಿದ ಅವರು, ರಾಜ್ಯದಲ್ಲಿ ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿರುವ ಪತ್ರಕರ್ತರ ಸಮಸ್ಯೆಗಳ ಬಗ್ಗೆ ಕಳೆದ ಹಲವಾರು ವರ್ಷಗಳಿಂದ ಸರ್ಕಾರದೊಡನೆ ಚರ್ಚೆ ನಡೆಸುತ್ತಿದ್ದು, ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯನ್ನು ಹೆಚ್ಚು ಬಲಗೊಳಿಸುವ ಅವಶ್ಯಕತೆ ಇದೆ. ತಾಲ್ಲೂಕು ಘಟಕದ ಅಧ್ಯಕ್ಷರನ್ನಾಗಿ ಪತ್ರಕರ್ತರ ಜಾಲಿಮಂಜುರವರನ್ನು ನೇಮಿಸಿದ್ದು, ಮುಂದಿನ ದಿನಗಳಲ್ಲಿ ಅವರು ಸಂಘಟನೆಯನ್ನು ಬಲಗೊಳಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನನ ನಡೆಸುವಂತೆ ಸೂಚನೆ ನೀಡಲಾಗಿದೆ ಎಂದರು.

ತಾಲ್ಲೂಕು ಅಧ್ಯಕ್ಷರಾಗಿ ನಿಯೋಜನೆಗೊಂಡ ಜಾಲಿಮಂಜು ಕಳೆದ ಹಲವಾರು ವರ್ಷಗಳಿಂದ ಪತ್ರಿಕಾಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ನನಗೆ ರಾಜ್ಯಮಟ್ಟದ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ತಾಲ್ಲೂಕು ಅಧ್ಯಕ್ಷರನ್ನಾಗಿ ನೇಮಿಸಿದ್ದು, ಸಂಘಟನೆಯನ್ನು ಬಲಗೊಳಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುವುದಾಗಿ ಭರವಸೆ ನೀಡಿದರು.

### ಅಹಿಂದ ವರ್ಗ ಕಾಂಗ್ರೆಸ್ ಬೆಂಬಲಿಸಲು ಮನವಿ

» **ದಾವಣಗೆರೆ**

ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳಿಗೆ ಅಹಿಂದಒಕ್ಕೂಟದ ಎಲ್ಲ ಪದಾಧಿಕಾರಿಗಳು ಅಹಿಂದ ವರ್ಗದ ಮತವನ್ನು ಕಾಂಗ್ರೆಸ್ ಅಭ್ಯರ್ಥಿಗಳಿಗೆ ಮತ ಚಲಾಯಿಸುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ರವರ ಬೆಂಬಲವಾಗಿ ನಿಂತು ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸುವಂತೆ ಅಹಿಂದ ಕರ್ನಾಟಕ ರಾಜ್ಯ ಹಿರಿಯ ಉಪಾಧ್ಯಕ್ಷ ಡಾ. ಬಿ. ವಾಸುದೇವ ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ.

### ಕುಡಿಯುವ ನೀರಿನ ಸಹಾಯವಾಣಿ

» **ದಾವಣಗೆರೆ**

ಹರಿಹರ ತಾಲ್ಲೂಕಿನ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳನ್ನು ಪರಿಹರಿಸಿ ಕೂಡಲೇ ಸಹಾಯವನ್ನು ಒದಗಿಸಲು ಹರಿಹರ ತಾಲ್ಲೂಕು ಪಂಚಾಯತ್ ಕಚೇರಿಯಲ್ಲಿ ಕುಡಿಯುವ ನೀರಿನ ಸಹಾಯಕ್ಕಾಗಿ 8310479055, 08192-200836 ದೂರವಾಣಿ ಸ್ಥಾಪಿಸಲಾಗಿದೆ ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

### ತಿಪ್ಪೇರುದ್ರಸ್ವಾಮಿ ರತೋತ್ಸವ ಪ್ರಯುಕ್ತ ಅನ್ನಸಂತರ್ಪಣೆ



» **ಚಿತ್ರದುರ್ಗ**

ನಗರದ ಕೆಳಗೋಟೆಯ ಶ್ರೀ ಗುರು ತಿಪ್ಪೇರುದ್ರಸ್ವಾಮಿ ಟ್ರಸ್ಟ್ ಕಮಿಟಿಯವತಿಯಿಂದ ಶ್ರೀ ಗುರು ತಿಪ್ಪೇರುದ್ರಸ್ವಾಮಿ ರತೋತ್ಸವ ಪ್ರಯುಕ್ತ ಸ್ವಾಮಿಗೆ ಪೂಜಾ ಮಹೋತ್ಸವ, ಪಲ್ಲಕ್ಕಿ ಉತ್ಸವ ಹಾಗೂ ಅನ್ನ ಸಂತರ್ಪಣೆ ಕಾರ್ಯಕ್ರಮವನ್ನು ನಡೆಸಲಾಯಿತು. ಸೋಮವಾರ ಗಂಗಾಪೂಜೆ, ಧ್ವಜಾರೋಹಣ ಕಾರ್ಯಕ್ರಮ ನಡೆದಿದ್ದು, ರಾತ್ರಿ ಭಕ್ತರಿಂದ ಸ್ವಾಮಿಯ ಭಜನಾ ಕಾರ್ಯಕ್ರಮ ನಡೆಸಲಾಯಿತು. ಇಂದು ಬೆಳಿಗ್ಗೆ ಸ್ವಾಮಿಗೆ ರುದ್ರಾಭೀಷೇಕ, ನಡೆಸಿದ್ದು ಸ್ವಾಮಿಯ ಪ್ರತಿಮೆಗೆ ವಿವಿಧ ರೀತಿಯ ಹೂಗಳ ಅಲಂಕಾರ ಮಾಡಿದ್ದು, ಮಧ್ಯಾಹ್ನ ಸ್ವಾಮಿಯ ಪಲ್ಲಕ್ಕಿ ಉತ್ಸವನ್ನು ನಡೆಸಲಾಯಿತು. ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ನಗರದ ಶ್ರೀ ಕಬೀರಾನಂದಾಶ್ರಮದ ಶ್ರೀ ಶಿವಲಿಂಗಾನಂದ ಶ್ರೀಗಳು ವಹಿಸಿದ್ದು, ಕೆಳಗೋಟೆಯ ದೇವಾಲಯಕ್ಕೆ ಆಗಮಿಸುವುದರ ಮೂಲಕ ಸ್ವಾಮಿಯ ದರ್ಶನವನ್ನು ಪಡೆದಿದ್ದಾರೆ. ಈ ಸಂದರ್ಭದಲ್ಲಿ ಪೋಲಿಸ್ ತರಬೇತಿ ರಕ್ಷಣಾಧಿಕಾರಿಗಳಾದ ಪಾಪಣ್ಣ, ಹೊಂಡ ಷೊ ರೂಂನ ಮಾಲಿಕರಾದ ವಿಶ್ವನಾಥ್, ಕಬೀರಾನಂದಾಶ್ರಮದ ಕಾರ್ಯದರ್ಶಿ ವಿ.ಎಲ್.ಪ್ರಶಾಂತ್, ನಾಗರಾಜ್ ಸಂಗಂ, ಮಂಜುನಾಥ್ ಗುಪ್ತ, ಪ್ರವೀಣ್, ತಿಪ್ಪೇಸ್ವಾಮಿ, ನಿರಂಜನ, ಜ್ಞಾನಮೂರ್ತಿ, ರಾಮಣ್ಣ, ಸೇರಿದಂತೆ ಭಕ್ತ ವೃಂದ ಭಾಗವಹಿಸಿದ್ದರು.

---

**ಶುದ್ಧಿಕರಣದಿಂದ ಪೋಲಾಗುವ ನೀರಿನಿಂದ ಅಂತರ್ಜಲ ವೃದ್ಧಿಗೊಳಿಸಿ ಹಾಗೂ ಸಂರಕ್ಷಣೆಗೆ ಬೇಕು ಕಳಕಳಿ.**

**ಫಿಲ್ಟರ್ ಆಗುವಾಗ ಅರ್‌ಓ ಘಟಕಗಳಲ್ಲಿ ಸಾವಿರಾರು ಲೀಟರ್ ನೀರು ವ್ಯರ್ಥ**

# ಬರದಲ್ಲಾದರೂ ಪುರ್ನಬಳಕೆಗೆ ಬೇಕು ಜಾಗೃತಿ

» **ಮಹದೇವಪುರ ಶಿವಮೂರ್ತಿ.**

ಪರಶುರಾಂಪುರ – ಶುದ್ಧ ಕುಡಿಯುವ ನೀರಿನ ಘಟಕಗಳಿಂದ ಫಿಲ್ಟರ್ ಆಗುವಾಗ ಸಾವಿರಾರು ಲೀಟರ್ ನೀರು ಚರಂಡಿ ಪಾಲಾಗುತ್ತಿದೆ. ಈ ವ್ಯಾರ್ಥವಾಗುವ ನೀರನ್ನ ಬರಗಾಲದಲ್ಲಾದರೂ ನೀರಿನ ಅಭಾವ ಎದುರಿಸುತ್ತಿರುವಾಗ ನೀರಿನ ಉಪಯೋಗ ಹಾಗೂ ಪುನರ್ಬಳಕೆಗೆ ಬೇಕು ಜಾಗೃತಿ ಮೂಡಿಸುವ ಕೆಲಸವಾಗಲಿ ಎಂಬುದು ನೀರು ಸಂರಕ್ಷಣಾವಾದಿಗಳ ಕಳಕಳಿ.

ಗ್ರಾಮೀಣ ಪ್ರದೇಶದಲ್ಲಿ ನೂರಾರು ಶುದ್ಧಾ ಕುಡಿಯುವ ನೀರಿನ ಘಟಕಗಳಿವೆ..ಈ ಘಟಕಗಳಿಂದ ಸಾರ್ವಜನಿಕರಿಗೆ ಸಾಕಷ್ಟು ಅನುಕೂಲವು ಆಗಿದೆ. ಆದರೆ ಶುದ್ಧಿಕರಣಗೊಳ್ಳುವ ವೇಳೆ ಕೊಳವೆಬಾವಿಯ ನೀರಿನಲ್ಲಿರುವ ಗಡಸುತನ,ಉಪ್ಪಿನಂಶಗಳನ್ನ ಈ ಘಟಕಗಳಲ್ಲಿ ಶುದ್ಧೀಕರಿಸಿದ ಶುದ್ಧ ನೀರನ್ನ ನೀಡುತ್ತಿವೆ. 5 ಸಾವಿರ ಲೀಟರ್ ಘಟಕಗಳಲ್ಲಿ ಶೇ 60ರಷ್ಟು ದುಪ್ಪಟ ನೀರು ವ್ಯರ್ಥವಾಗಿ ಚರಂಡಿಗೆ ಘಟಕಗಳಿಂದ ಸಾವಿರಾರು ಲೀಟರ್ ನೀರು ಪೋಲಾಗುತ್ತಿದೆ ಎಂಬುದು ಗಮನಾರ್ಹ.ಈ ನೀರನ್ನ ಬೇರೆ ಉಪಯೋಗಗಳಿಗೆ ಬಳಸಲು ಬೇಕಿದೆ ಜಾಗೃತಿಯ ಜತೆ ಕಳಕಳಿ ಬರಲಿ ಎಂಬುದು ಆಶಯ.

ಭೂಮಿಗೆ ಇಂಗಿಸುವ ಪ್ರಯತ್ನವನ್ನ ಸಂಬಂಧಪಟ್ಟ ಇಲಾಕೆಗಳು ವ್ಯರ್ಥವಾಗುವ ನೀರಿನ ಉಪಯೋಗಕ್ಕೆ ಯೋಜನೆಗಳನ್ನ ರೂಪಿಸಬೇಕು ಹಾಗೂ ಇದರ ಜತೆಯಲ್ಲಿ





ಸ್ಥಳೀಯ ಸಂಸ್ಥೆಗಳು ಮಾಡಬೇಕಿದೆ ಎಂದು ಜಲ ತಜ್ಞರ ಅಭಿಪ್ರಾಯ.

**ಕೊಳುವೆ ಬಾವಿಗೆ ಮರುಪೂರ್ಣದಿಂದ ಅಂತರ್ಜಲ ವೃದ್ಧಿ:** ಸಾಕಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳಿಗೆ ಕೊಳವೆಬಾವಿಯೇ ಆಧಾರ.ಹೀಗೆ ಶುದ್ಧಿಕರಿಸಿದ ನೀರನ್ನ ಚರಂಡಿಗೋ ಅಥವಾ ಹೊರ ಭಾಗಕ್ಕೆ ಬಿಡುವ ಬದಲು ಆ ಕೊಳವೆ ಬಾವಿಗೆ ಮರುಪೂರ್ಣ ಮಾಡಿದರೆ ಅಂತರ್ಜಲ ವೃದ್ಧಿಗೆ ಸಹಾಯವಾಗಲಿದೆ.ಈ ಕೊಳವಿ ಬಾವಿಯಲ್ಲಿ ನೀರು ಬತ್ತದಂತೆ ಈ ಮರುಪೂರ್ಣ ನೆರವಾಗುತ್ತದೆ. ಕೊಳವೆ ಬಾವಿಯ ಪೈಪ್ ಹಳ್ಳ ಮಾಡಿ ಅದಕ್ಕೆ ಇಂಗಿಸುವ ಕೆಲಸವಾದರೆ ಅಂತರ್ಜಲ ವೃದ್ಧಿಗೆ ಸಹಾಯವಾಗುತ್ತದೆ ಎಂಬುದು ಪರಿಸರ ಪ್ರೇಮಿಗಳ ಅಭಿಮತವಾಗಿದೆ.

ಬರಗಾಲದಲ್ಲಿ ನೀರಿನ ಅಭಾವ ಇರುವುದರಿಂದ ಫಿಲ್ಟರ್ ವಾಟರ್ ಘಟಕ ಬಳಿ ವ್ಯರ್ಥವಾಗುವ ನೀರಿನಿಂದ ಸಿಮೆಂಟಿನ ರಿಂಗ್ ತೋಟ್ಟಿಗಳನ್ನ ಜೋಡಿಸಿ ಬೇಸಿಗೆ ಸಮಯವಾದ್ದರಿಂದ ಗೃಹೋಪಯೋಗಕ್ಕೆ ಇಲ್ಲವೇ ಕೈ ತೋಟ ಜತೆಯಲ್ಲಿ ತೋಟಗಳಿಗೆ ಬಳಸಲು ಸಹಕಾರಿಯಾಗುವುದು ಎಂಬುದು ಸಾರ್ವಜನಿಕರ ಆಶಯವಾಗಿದೆ.

**ತ್ಯಾಜ್ಯ ನೀರನ್ನು ಮರುಬಳಕೆ ಮಾಡಲು ಕೆಲವು ಸರಳ ಮಾರ್ಗಗಳು ಇಲ್ಲಿವೆ:**

ಮಾಪಿಂಗ್ ಮತ್ತು ಸ್ವಚ್ಛಗೊಳಿಸಲು– ಪ್ರತಿದಿನ ಮನೆಗಳನ್ನು ಸ್ವಚ್ಛಗೊಳಿಸುವುದರಿಂದ ಸಾಕಷ್ಟು ನೀರು ವ್ಯರ್ಥವಾಗುತ್ತಿದೆ.ವಾಟರ್ ಶುದ್ಧೀಕರಣ ವ್ಯವಸ್ಥೆಯಿಂದ ಹೆಚ್ಚಿನ ನೀರನ್ನು ತ್ಯಾಜ್ಯ ನೀರಿನಿಂದ ಸುಲಭವಾಗಿ ಬದಲಾಯಿಸಬಹುದು. ಹೊರಹಾಕಿದ ನೀರನ್ನು ಮನೆಗಳನ್ನು ಸ್ವಚ್ಛಗೊಳಿಸಲು ಮತ್ತು ಸ್ವಚ್ಛಗೊಳಿಸಲು ಮರುಬಳಕೆ ಮಾಡಬಹುದು.

ನಿಮ್ಮ ತೋಟಕ್ಕೆ ನೀರುಣಿಸಲು ಇದನ್ನು ಬಳಸಿ–ಸಸ್ಯಗಳಿಗೆ ನೀರುಣಿಸಲು ತ್ಯಾಜ್ಯ ನೀರನ್ನು ಬಳಸುವುದು ಅವುಗಳ ಜೀವಿತಾವಧಿ ಮತ್ತು ಬೆಳವಣಿಗೆಗೆ ಪ್ರಯೋಜನಕಾರಿ. ನೀರಿನಲ್ಲಿನ ಬದಲಾವಣೆಗಳು ಅವುಗಳ ಬೆಳವಣಿಗೆಯ ಮೇಲೆ ಹೇಗೆ ಪರಿಣಾಮ ಬೀರುತ್ತವೆ ಎಂಬುದನ್ನು ನೋಡಲು ನೀವು ಮೊದಲು ಕೆಲವು ಸಸ್ಯಗಳನ್ನು ಪರೀಕ್ಷಿಸಬಹುದು.

ಪಾತ್ರೆಗಳನ್ನು ಸ್ವಚ್ಛಗೊಳಿಸಲು ಇದನ್ನು ಬಳಸಿ–ವಾಟರ್ ಫಿಲ್ಟರ್‌ನಿಂದ ತ್ಯಾಜ್ಯ ನೀರನ್ನು ಬಳಸುವ ಅತ್ಯುತ್ತಮ ಮಾರ್ಗಗಳಲ್ಲಿ ಇದು ಒಂದಾಗಿರಬಹುದು. ಹೆಚ್ಚಿನ ತ್ಯಾಜ್ಯ ಕೊಳವೆಗಳನ್ನು ಅಡಿಗೆ ಸಿಂಕ್ ಬಳಿ ಇರಿಸಲಾಗುತ್ತದೆ, ಆದ್ದರಿಂದ ಅವುಗಳನ್ನು ಭಕ್ಷ್ಯಗಳು ಮತ್ತು ಇತರ ಪಾತ್ರೆಗಳನ್ನು ಸ್ವಚ್ಛಗೊಳಿಸಲು ಸುಲಭವಾಗಿ ಬಳಸಬಹುದು.

ಕಾರ್ ಅಥವಾ ರೆಸ್ಟ್ ರೂಂ ಅನ್ನು ಸ್ವಚ್ಛಗೊಳಿಸಲು ಇದನ್ನು ಬಳಸಿ– ಶೌಚಾಲಯಗಳನ್ನು ಸ್ವಚ್ಛಗೊಳಿಸಲು ಅಥವಾ ಕಾರುಗಳನ್ನು ತೊಳೆಯಲು ಸಾಕಷ್ಟು ಬಕೆಟ್ ನೀರು ಬೇಕಾಗುತ್ತದೆ. ಆದ್ದರಿಂದ, ನೀರಿನ ತ್ಯಾಜ್ಯವನ್ನು ತಪ್ಪಿಸಲು, ಈ ಉದ್ದೇಶಗಳಿಗಾಗಿ ತ್ಯಾಜ್ಯ ನೀರನ್ನು ಬಳಸಬಹುದು.

ವಾಟರ್ ಕೂಲರ್‌ಗಳಿಗೆ ಇದನ್ನು ಬಳಸಿ–ತ್ಯಾಜ್ಯನೀರಿನೊಂದಿಗೆ ಸ್ವಲ್ಪ ಟ್ಯಾಪ್ ನೀರನ್ನು ಮಿಶ್ರಣ ಮಾಡಿ ಮತ್ತು ಬೇಸಿಗೆಯಲ್ಲಿ ನೀರಿನ ಕೂಲರ್ ಅನ್ನು ತುಂಬಲು ಅದನ್ನು ಮರುಬಳಕೆ ಮಾಡಬಹುದು.

ಈ ಸಣ್ಣ ಕ್ರಮಗಳು ಪರಿಸರದಲ್ಲಿ ಗಮನಾರ್ಹ ಬದಲಾವಣೆಗಳನ್ನು ತರಬಹುದು. ಆದ್ದರಿಂದ, ನಿಮ್ಮ ಕುಟುಂಬವು ಶುದ್ಧ ಕುಡಿಯುವ ನೀರಿಗೆ ಸುರಕ್ಷಿತ ಪ್ರವೇಶವನ್ನು ಹೊಂದಿದೆ ಎಂದು ಖಚಿತಪಡಿಸಿಕೊಳ್ಳುವಾಗ, ನೀರಿನ ತ್ಯಾಜ್ಯದ ಬಗ್ಗೆ ಗಮನ ಹರಿಸಲು ಮತ್ತು ಸಾಧ್ಯವಾದಷ್ಟು ನೀರನ್ನು ಉಳಿಸಲು ಈ ಸರಳ ಸಲಹೆಗಳನ್ನು ಬಳಸಬಹುದು.

---

## ಬೆಳ್ಳಂಬೆಳಿಗ್ಗೆ ಡಾ.ಪ್ರಭಾ ಮಿಂಚಿನ ಸಂಚಾರ

» **ದಾವಣಗೆರೆ**

ದಾವಣಗೆರೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ. ಪ್ರಭಾ ಮಲ್ಲಿಕಾರ್ಜುನ್ ಭಾನುವಾರ ಬೆಳ್ಳಂಬೆಳಿಗ್ಗೆ ಕುಂದುವಾಡ ಕೆರೆ, ಇನ್ ಡೋರ್ ಸ್ಟೇಡಿಯಂ ಹಾಗೂ ಎಸ್ ಎಸ್ ಬಡಾವಣೆ ತರಕಾರಿ ಮಾರುಕಟ್ಟೆಗಳಲ್ಲಿ ಮಿಂಚಿನ ಸಂಚಾರ ನಡೆಸಿ ಮತಯಾಚನೆ ಮಾಡಿದರು.

ಕುಂದುವಾಡ ಕೆರೆಯ ವಾಯುವಿಹಾರಿಗಳ ಜೊತೆ ಆಪ್ತವಾಗಿ ಮಾತನಾಡಿದ ಪ್ರಭಾ ಅವರು, ಜಿಲ್ಲೆಯ ಅಭಿವೃದ್ಧಿಗೆ ಕಾಂಗ್ರೆಸ್ ಅಭ್ಯರ್ಥಿಯಾದ ತಮಗೆ ಮತ ನೀಡಬೇಕೆಂದು ಮನವಿ ಮಾಡಿದರು. ತಮ್ಮ ಯೋಜನೆಗಳನ್ನು ವಿವರಿಸಿ ಹೇಳಿದರು. ತಮ್ಮ ಪತಿ, ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಅವರ ದೂರದೃಷ್ಟಿಯ ಕಾರಣ ಕುಂದುವಾಡ ಕೆರೆ ಮರು ನಿರ್ಮಾಣವಾಗಿ ದಾವಣಗೆರೆ ಜನತೆಗೆ ಕುಡಿವ ನೀರಿನ ಕೊರತೆ ನಿವಾರಣೆ ಮಾಡಿದೆ. ಅದೇ ರೀತಿ ಟಿ.ವಿ. ಸ್ಟೇಶನ್ ಕೆರೆಯ ಹೂಳು ತೆಗೆದು ಇನ್ನಷ್ಟು ನೀರು ಶೇಖರಣೆಗೆ ಅವಕಾಶ ಮಾಡಿದ್ದರಿಂದ ಆ ಭಾಗದ ಜನತೆಗೆ ನೀರು ದೊರೆಯುತ್ತಿದೆ. ಈ ಎಲ್ಲ ಅಭಿವೃದ್ಧಿ ನೋಡಿ ತಮಗೆ ಮತ ನೀಡಬೇಕೆಂದು ಅವರು ಮನವಿ ಮಾಡಿದರು.

ನಂತರ ಇನ್ ಡೋರ್ ಸ್ಟೇಡಿಯಂ



ಕ್ರೀಡಾಪಟುಗಳು ಜೊತೆ ಮಾತನಾಡಿ ಮತಯಾಚನೆ ಮಾಡಿದರು. ದಾವಣಗೆರೆ ಲೋಕಸಭಾ ಕ್ಷೇತ್ರದ ಅಭಿವೃದ್ಧಿಗೆ ಒಮ್ಮೆ ತಮಗೆ ಅವಕಾಶ ನೀಡಬೇಕೆಂದು ವಿನಂತಿಸಿದರು.

ಎಸ್. ಎಸ್. ಬಡಾವಣೆ ತರಕಾರಿ ಮಾರುಕಟ್ಟೆಯಲ್ಲಿ ವ್ಯಾಪಾರ ಮಾಡುತ್ತಿದ್ದ ಪುರುಷರು ಮತ್ತು ಮಹಿಳಾ ವ್ಯಾಪಾರಿಗಳ ಬಳಿ ಮತಯಾಚನೆ ಜೊತೆಗೆ ಅವರ ಆರ್ಥಿಕ ಸ್ಥಿತಿಗತಿ, ಆರೋಗ್ಯದ ಬಗ್ಗೆಯೂ ವಿಚಾರಿಸಿದ ಪ್ರಭಾ, ಆರೋಗ್ಯ ಕಾಪಾಡಿಕೊಳ್ಳುವಂತೆ ತಿಳಿಸಿದರು. ಮಹಿಳೆಯರು, ಯುವಕರು ಸೇರಿದಂತೆ ಪ್ರತಿಯೊಬ್ಬರೂ ಒಬ್ಬರಿಗೊಬ್ಬರು ತಿಳಿಸಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡುವಂತೆ ವಿನಂತಿಸಿದರು. ವಾಯುವಿಹಾರಿಗಳು ಹಾಗೂ ವರ್ತಕರು ಕೂಡ ಪ್ರಭಾ ಅವರನ್ನು ಅತ್ಯಂತ ಆತ್ಮೀಯತೆಯಿಂದ ಸ್ವಾಗತಿಸಿದರು.

## ತಾಲ್ಲೂಕು ಪಂಚಾಯಿತಿಗೆ ಆರು ಜನ ನಾಮನಿರ್ದೇಶನ ಸದಸ್ಯರ ಆಯ್ಕೆ



» **ಚಳ್ಳಕೆರೆ**

ತಾಲ್ಲೂಕು ಪಂಚಾಯಿತಿ ನಾಮನಿರ್ದೇಶನ ಸದಸ್ಯರಾಗಿ 6 ಜನರನ್ನು ನೇಮಕ ಮಾಡಿ ಸರ್ಕಾರದ ಸಾಂಖ್ಯಿಕ ಇಲಾಖೆ ಅಧೀನ ಕಾರ್ಯದರ್ಶಿ ಆದೇಶ ಹೊರಡಿಸಿರುತ್ತಾರೆ. ನಗರಂಗೆರೆ ಎಂ.ರಮೇಶ್, ಚೌಳೂರಿನ ಟಿ.ಬಸವರಾಜು, ಚಳ್ಳಕೆರೆ ನಗರದ ಕಾಂಗ್ರೆಸ್ ಪಕ್ಷದ ಯುವ ಮುಖಂಡ ಸುರೇಶ್‌ಕುಮಾರ್, ನಾಯಕನಹಟ್ಟಿಯ ಜಾಕೀರ್‌ಹುಸೇನ್, ಯಾದಲಗಟ್ಟೆಯ ನೇತ್ರಾವತಿ, ಚಿಕ್ಕಹಳ್ಳಿಯ ಎಸ್.ಬಿ.ವಿಶ್ವನಾಥರೆಡ್ಡಿ ಇವರನ್ನು ತಾಲ್ಲೂಕು ಪಂಚಾಯಿತಿಗೆ ನಾಮನಿರ್ದೇಶನ ಸದಸ್ಯರನ್ನಾಗಿ ಆಯ್ಕೆ ಮಾಡಲಾಗಿದೆ. ಶಾಸಕ ಟಿ.ರಘುಮೂರ್ತಿ ಎಲ್ಲಾ ನಾಮನಿರ್ದೇಶನ ಸದಸ್ಯರನ್ನು ಅಭಿನಂದಿಸಿ ತಾಲ್ಲೂಕು ಪಂಚಾಯಿತಿಯ ಅಭಿವೃದ್ಧಿ ಪರಚಿಂತನೆಗಳಿಗೆ ಪ್ರೇರಕ ಶಕ್ತಿಯಾಗಿ ದುಡಿಯಬೇಕು ಹಾಗೂ ಜನರ ಸಂಕಷ್ಟಗಳಿಗೆ ಸಕರಾತ್ಮಕವಾಗಿ ಸ್ಪಂದಿಸುವಂತೆ ಮನವಿ ಮಾಡಿದ್ದಾರೆ.

---

### ನಿವೇಶನ ನೀಡಲು ಒತ್ತಾಯಿಸಿ ಗ್ರಾಮದ ರಸ್ತೆಯಲ್ಲೇ ಅಹೋರಾತ್ರಿ ಧರಣಿ ನಡೆಸಿದ ಮಹಿಳೆಯರು



**ಚಳ್ಳಕೆರೆ:** ತಾಲ್ಲೂಕಿನ ಸಾಣಿಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಂಜಿಗುಂಟೆ ಗ್ರಾಮದಲ್ಲಿ ನಿವೇಶನ ನೀಡುವಂತೆ ಒತ್ತಾಯಿಸಿ ಅಲ್ಲಿನ ನಿವೇಶನ ರಹಿತ ಮಹಿಳೆಯರು ಗ್ರಾಮದ ಪ್ರಮುಖ ರಸ್ತೆಯಲ್ಲಿ ಆಹೋರಾತ್ರಿ ಧರಣಿ ನಡೆಸುವ ಮೂಲಕ ತಮ್ಮ ಆಕ್ರೋಶವನ್ನು ಹೊರಹಾಕಿದ್ದಾರೆ. ಧರಣಿ ನಿರತ ಮಹಿಳೆಯರಾದ ಕೆಂಚಮ್ಮ, ಶೈಲಮ್ಮ, ಚೌಡಮ್ಮ, ಕಮಲಮ್ಮ, ದೇವಿರಮ್ಮ, ಯಶೋಧಮ್ಮ, ಲಕ್ಷ್ಮಕ್ಕ, ವಿಜಯಮ್ಮ, ತಿಪ್ಪಕ್ಕ, ಕರಿಯಮ್ಮ, ಶಾರದಮ್ಮ ಮುಂತಾದವರು ಮಾತನಾಡಿ, ಗ್ರಾಮದಲ್ಲಿ ಕಳೆದ ಹಲವಾರು ದಶಕಗಳಿಂದ 20ಕ್ಕೂ ಹೆಚ್ಚು ನಿವೇಶನ ರಹಿತ ಕುಟುಂಬಗಳು ವಾಸಿಸುತ್ತಿದ್ದರೂ ನಮಗೆ ನಿವೇಶನ ಮನೆ ನೀಡಿಲ್ಲ. ಸರ್ಕಾರದ ಸವಲತ್ತು ಪಡೆಯುವ ನಿಟ್ಟಿನಲ್ಲಿ ಪ್ರಯತ್ನಿಸಿ ವಿಫಲವಾಗಿದ್ದೇವೆ. ಅಧಿಕಾರಿಗಳಾಗಲಿ, ಚುನಾಯಿತ ಜನಪ್ರತಿನಿಧಿಗಳಾಗಲಿ ನಮ್ಮ ಮನವಿಯನ್ನು ಪುರಸ್ಕರಿಸಲು ಸಿದ್ದರಿಲ್ಲ. ಗ್ರಾ ಪಂ ನಮಗೆ ನಿವೇಶನ ನೀಡುವಂತೆ ವಿನಂತಿಸಿಕೊಂಡರೂ ಇದುವರೆಗೂ ಈ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ.

---

**ಪ್ರಮುಖ ಸುದ್ದಿ**

**ಸಹಾಯಕ ಚುನಾವಣಾಧಿಕಾರಿ ಮಹೇಂದ್ರ ಕುಮಾರ್ ಸೂಚನೆ**

# ನೀತಿ ಸಂಹಿತೆ ಮೀರಿ, ಹಣದ ವಹಿವಾಟು ನಡೆಸುವಂತಿಲ್ಲ

» **ಹೊಸದುರ್ಗ**

ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ನೀತಿ ಸಂಹಿತೆಯ ನಿಯಮವನ್ನು ಪಾಲಿಸಬೇಕು.ಯಾರಿಗೂ ಕೂಡ ನಿಯಮ ಮೀರಿ, ಹಣವನ್ನು ನೀಡುವಂತಿಲ್ಲ. ಅಂಗಡಿ ಮಾಲೀಕರು, ಉದ್ಯೋಗಸ್ಥರು ತಾವು ವಹಿವಾಟು ನಡೆಸುವ ಹಣಕ್ಕೆ ಸೂಕ್ತ ದಾಖಲೆಗಳನ್ನ ಇಟ್ಟುಕೊಂಡಿರಬೇಕು. ಒಂದು ವೇಳೆ ನಿಮ್ಮ ಮೀರಿದರೆ, ಅಂಥವರ ವಿರುದ್ಧ ಕೇಸ್ ದಾಖಲಿಸಲಾಗುವುದು ಎಂದು ಸಹಾಯಕ ಚುನಾವಣಾಧಿಕಾರಿ ಮಹೇಂದ್ರ ಕುಮಾರ್ ಮಾಹಿತಿ ಸೂಚನೆ ನೀಡಿದರು.

ಪಟ್ಟಣದ ತಾಲೂಕು ಕಚೇರಿಯಲ್ಲಿ ಮಂಗಳವಾರ ಕರೆದಿದ್ದ ಚಿನ್ನಾಭರಣ ತಯಾರಕರು, ಮಾರಾಟಗಾರರು, ಹೋಟೆಲ್ ಮಾಲೀಕರು, ವಸತಿಗೃಹ, ಕಲ್ಯಾಣ ಮಂಟಪ, ಬೋರ್ವೆಲ್ಸ್, ಪೆಟ್ರೋಲ್ ಬಂಕ್ ಮಾಲೀಕರು, ಗಿರವಿ ದಲ್ಲಾಳಿಗಳು ಹಾಗೂ ಎಲ್ಲ ಬ್ಯಾಂಕಗಳ ವ್ಯವಸ್ಥಾಪಕರ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ಬ್ಯಾಂಕುಗಳಲ್ಲಿ ಹೆಚ್ಚು ಹಣವನ್ನು ನೀಡುವಂತಿಲ್ಲ. ನೀತಿ ಸಂಹಿತೆ ಜಾರಿ ಇರುವುದರಿಂದ 50.ಸಾವಿರಕ್ಕಿಂತ



ಹೆಚ್ಚು ನಗದು ಹಣವನ್ನು ತೆಗೆದುಕೊಂಡು ಹೋಗುವಂತಿಲ್ಲ. ಒಂದು ವೇಳೆ ಯಾರಾದರೂ ನಿಯಮವನ್ನು ಮೀರಿ, ಹಣ ಪಡೆದರೆ ಮತ್ತು ನೀಡಿದರೆ ಅಂಥವರ ಮೇಲೆ ನಿರ್ದಾಕ್ಷಣ್ಯವಾಗಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು. ಬಂಗಾರದ ಅಂಗಡಿ ಮತ್ತು ಗಿರವಿ ಲೇವಾದೇವಿ ಅಂಗಡಿ ಮಾಲೀಕರು ಹೆಚ್ಚಿನ ಸಂಖ್ಯೆಯಲ್ಲಿ ಒಂದೇ ಮಾದರಿಯ ಆಭರಣಗಳನ್ನು ಖರೀದಿ ಮಾಡುವವರು ಮಾಹಿತಿಯನ್ನು ಚುನಾವಣಾ ಅಧಿಕಾರಿಗಳ ಕಾರ್ಯಾಲಯಕ್ಕೆ ತಿಳಿಸಬೇಕು. ವಸತಿ ಗೃಹಗಳ ಮಾಲೀಕರು ವಸತಿ ಇರುವವರ ದಾಖಲೆಗಳನ್ನು ಪಡೆದುಕೊಳ್ಳಬೇಕು. ಅನ್ಯ ಜಿಲ್ಲೆಗಳಿಂದ ಬರುವವರಿಗೆ ಮತದಾನದ 2 ದಿನ ಮುಂಚೆ ವಸತಿ ಸೌಕರ್ಯ ನೀಡಬಾರದು. ಪೆಟ್ರೋಲ್ ಬಂಕ್ ಮಾಲೀಕರುಗಳು ತಮ್ಮ ಬಂಕ್ ನಲ್ಲಿ ರಾಜಕೀಯ ಪಕ್ಷದವರ ಚೀಟಿಗಳನ್ನು ನೀಡಿ ಪೆಟ್ರೋಲ್/ಡಿಸೇಲ್ಗಳನ್ನು ಪೂರೈಸುವಂತೆ ತಿಳಿಸಿದರೆ, ಅಂಥವರ ಮಾಹಿತಿಯನ್ನು ಚುನಾವಣಾ ಅಧಿಕಾರಿಗಳ ಕಾರ್ಯಾಲಯಕ್ಕೆ ತಿಳಿಸಬೇಕು ಎಂದರು.

ಕಲ್ಯಾಣ ಮಂಟಪದಲ್ಲಿ ಯಾವುದೇ ರಾಜಕೀಯ ಸಭೆಗಳಿಗೆ ಅನುಮತಿ ಇಲ್ಲದೆ ಅವಕಾಶ ನೀಡುವಂತಿಲ್ಲ. ಸಮಾರಂಭಗಳಿಗೆ ಬಾಡಿಗೆ ನೀಡುವ ಪೂರ್ವ ಬಾಡಿಗೆ ಪಡೆಯುವವರ ಮಾಹಿತಿಯನ್ನು ಚುನಾವಣಾ ಅಧಿಕಾರಿಗಳ ಕಾರ್ಯಾಲಯಕ್ಕೆ ಸಲ್ಲಿಸಿ, ನಂತರ ಸಮಾರಂಭ ನೆರವೇರಿಸಲು ಅನುಮತಿ ನೀಡಬೇಕು. ಕಲ್ಯಾಣ ಮಂಟಪಗಳಲ್ಲಿ ಯಾವುದೇ ರಾಜಕೀಯ ಸಭೆಗಳಿಗೆ ಅನುಮತಿ ಹಾಗೂ ಸಮಾರಂಭಗಳಲ್ಲಿ ಪ್ರಚಾರಕ್ಕೆ ಚುನಾವಣಾ ಅಧಿಕಾರಿಗಳು ಪೂರ್ವಾನುಮತಿ ಇಲ್ಲದೆ ಬಾಡಿಗೆಗೆ ನೀಡುವಂತಿಲ್ಲ. ಮತದಾನದ ದಿನಾಂಕದ 48 ಗಂಟೆ ಪೂರ್ವದಲ್ಲಿ ರಾಜಕೀಯ ವ್ಯಕ್ತಿಗಳು ಹೋಟೆಲ್ ಮತ್ತು ಲಾಡ್ಜಗಳಲ್ಲಿ ಬೆಂಗಳೂರು ಅನುಮತಿ ನೀಡುವಂತಿಲ್ಲವೆಂದು ಕಟ್ಟುನಿಟ್ಟಾಗಿ ಹೇಳಿದರು.

ಈ ಸಭೆಯಲ್ಲಿ ತಾಲೂಕು ಪಂಚಾಯಿತಿ ಇಓ ಸುನಿಲ್ ಕುಮಾರ್, ಪುರಸಭಾ ಮುಖ್ಯ ಅಧಿಕಾರಿ ತಿಮ್ಮರಾಜು, ಬಿಸಿಎಂ ಇಲಾಖೆ ವಿಸ್ತರಣಾಧಿಕಾರಿ ಶಶಿಧರ್ ಮತ್ತು ಎಸ್ ಬಿ ಐ ಬ್ಯಾಂಕ್ ನ ವ್ಯವಸ್ಥಾಪಕರು ಸೇರಿದಂತೆ ಎಲ್ಲಾ ಬ್ಯಾಂಕಗಳ ವ್ಯವಸ್ಥಾಪಕ ನಿರ್ದೇಶಕರು, ವ್ಯಾಪಾರಿಗಳು, ಪೆಟ್ರೋಲ್ ಬಂಕ್ ಮಾಲೀಕರು ಹಾಗೂ ಗಿರವಿ ದಲ್ಲಾಳಿಗಳು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಬಾಡಾ ಕ್ರಾಸ್ ಚೆಕ್‌ಪೋಸ್ಟ್‌ನಲ್ಲಿ ಎರಡು ಪ್ರಕರಣಗಳಲ್ಲಿ ರೂ.7.43 ಲಕ್ಷ ನಗದು ವಶ



» **ದಾವಣಗೆರೆ**

ಲೋಕಸಭಾ ಚುನಾವಣೆ ನಡೆಯುತ್ತಿದ್ದು ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ. ಮಾರ್ಚ್ 26 ರಂದು ಮಧ್ಯಾಹ್ನದ ವೇಳೆ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬಾಡಾ ಕ್ರಾಸ್ ಚೆಕ್‌ಪೋಸ್ಟ್‌ನಲ್ಲಿ ಎರಡು ಪ್ರಕರಣಗಳಲ್ಲಿ ರೂ.7.43 ಲಕ್ಷ ನಗದು ವಶಕ್ಕೆ ಪಡೆದು ತನಿಖೆ ಕೈಗೊಳ್ಳಲಾಗುತ್ತಿದೆ ಎಂದು ಸಹಾಯಕ ಚುನಾವಣಾಧಿಕಾರಿ ರೇಣುಕಾ ತಿಳಿಸಿದ್ದಾರೆ. ಕೆಎ-17-ಇಪಿ-7945 ಬೈಕ್ ಮೂಲಕ ರೂ. 2,50 ಲಕ್ಷ ಮತ್ತು ಕೆ.ಎ.17-ಹೆಚ್‌ಪಿ-6553 ಸಂಖ್ಯೆಯ ವಾಹನದಲ್ಲಿ ರೂ.4.93 ಲಕ್ಷ ನಗದು ಸಾಗಣೆ ಮಾಡುತ್ತಿದ್ದ ವೇಳೆ ಚೆಕ್‌ಪೋಸ್ಟ್ ಅಧಿಕಾರಿಗಳು ವಶಕ್ಕೆ ಪಡೆದು ಹಣ ಖಜಾನೆಯಲ್ಲಿರಿಸಿ ಮುಂದಿನ ತನಿಖೆ ಕೈಗೊಳ್ಳಲಾಗುತ್ತಿದೆ. ಚೆಕ್‌ಪೋಸ್ಟ್ ತಂಡದ ಅಧಿಕಾರಿ ಉಮೇಶ್ ಕುಮಾರ್ ಅವರು ಸ್ಥಳ ತನಿಖೆ ಮಾಡಿ ವರದಿ ನೀಡಿರುತ್ತಾರೆ.

### ಬಡ ಕುಟುಂಬದ ಮಕ್ಕಳ ಸಲುವಾಗಿ ಕಾರ್ಯಗಾರ ಅವಶ್ಯಕ



» **ಹೊಸದುರ್ಗ**

ಗ್ರಾಮೀಣ ಭಾಗ ಮತ್ತು ಬಡ ಕುಟುಂಬದ ವಿದ್ಯಾರ್ಥಿಗಳನ್ನು ಮೇಲೆತ್ತಲು ಕಳೆದ 2019 ರಿಂದ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಸಂಘ ತಾಲೂಕು ಘಟಕದ ವತಿಯಿಂದ ಸಿಇಟಿ ಮತ್ತು ನೀಟ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಂಬಂಧಪಟ್ಟಂತೆ ಕಾರ್ಯಗಾರವನ್ನು ಆರಂಭಿಸಲಾಗಿದೆ. ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಪ್ರಗತಿ ಸಾಧಿಸಲು ಇದು ಸಹಕಾರಿಯಾಗಲಿದೆ ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಆರ್. ಗಂಗಾಧರಪ್ಪ ಹೇಳಿದರು. ಪಟ್ಟಣದ ಸರ್ಕಾರಿ ಪದವಿಪೂರ್ವ ಕಾಲೇಜು ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ,ಹೊಸದುರ್ಗ ಇವರ ವತಿಯಿಂದ ಸೋಮವಾರ ಆಯೋಜಿಸಿದ್ದ ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ 'ಉಚಿತ ಸಿಇಟಿ, ನೀಟ್ ತರಬೇತಿ ಕಾರ್ಯಾಗಾರ' ಉದ್ಘಾಟಿಸಿ ಅವರು ಮಾತನಾಡಿದರು ಮಾತನಾಡಿದರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ವಿಸ್ತರಣಾಧಿಕಾರಿ ಶಶಿಧರ್ ಮಾತನಾಡಿ, ಬಡ ಮಕ್ಕಳು ಸಹ ಮೆಡಿಕಲ್ ಹಾಗೂ ಇಂಜಿನಿಯರಿಂಗ್ ನಂತಹ ಉನ್ನತ ವಿದ್ಯಾಭ್ಯಾಸ ಮಾಡಬೇಕು ಎಂಬ ಉದ್ದೇಶದಿಂದ ಸರ್ಕಾರಿ ನೌಕರರ ಸಂಘ ಉಚಿತ ಸಿಇಟಿ ನೀಟ್ ತರಬೇತಿ ನೀಡಲಾಗುತ್ತದೆ. ವಿದ್ಯಾರ್ಥಿಗಳು ಈ ಸೌಲಭ್ಯ ಪಡೆದುಕೊಳ್ಳಿ. ವಿದ್ಯಾರ್ಥಿ ಜೀವನ ಒಂದು ತಪಸ್ಸು ಇದ್ದಂತೆ ಪ್ರಾಮಾಣಿಕ ಪ್ರಯತ್ನ ಮಾಡಿ. ತಮ್ಮೂರಿಂದ ಬರಲು ತೊಂದರೆಯಾಗುತ್ತಿರುವ ವಿದ್ಯಾರ್ಥಿಗಳಿಗೆ ವಸತಿ (ಹಾಸ್ಟೆಲ್) ಸೌಲಭ್ಯವನ್ನು ಕಲ್ಪಿಸಲಾಗುವುದು ಎಂದು ಹೇಳಿದರು.

ಈ ಸಂಧರ್ಬದಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಗೌರವಾಧ್ಯಕ್ಷ ಜಯಣ್ಣ, ಮಾಜಿ ಅಧ್ಯಕ್ಷ ಆರ್. ಲಕ್ಕಯ್ಯ, ಪ್ರಧಾನ ಕಾರ್ಯದರ್ಶಿ ವಿರೇಂದ್ರ ಪಾಟೀಲ್, ಕಾಲೇಜು ಪ್ರಾಂಶುಪಾಲ ವಿಶ್ವನಾಥ್ ಮತ್ತು ಉಪನ್ಯಾಸಕರಾದ ನಿಸಾರ್‌ಅಹಮ್ಮದ್,ಜಗದೀಶ್ ಸೇರಿದಂತೆ ಇನ್ನಿತರ ಉಪನ್ಯಾಸಕರ ಹಾಗೂ ನೂರಾರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ನವರತನ್ ಮಲ್ ನಿಧನ

» **ಚಿತ್ರದುರ್ಗ**

ನಗರದ ಖ್ಯಾತ ಉದ್ಯಮಿ ಹಾಗೂ ನವರತ್ನ ಹೋಲ್‌ಸೇಲ್ ಕ್ಲಾತ್ ಸ್ಟೋರ್‌ನ ಮಾಲಿಕರಾದ ನವರತನ್ ಮಲ್ ಎಂ. (75) ಇಂದು ಬೆಳಿಗ್ಗೆ ನಿಧನರಾಗಿದ್ದಾರೆ. ಮೂರು ಜನ ಗಂಡು ಮಕ್ಕಳು ಸೇರಿದಂತೆ ಅಪಾರವಾದ ಬಂಧು ಬಳಗವನ್ನು ಅಗಲಿದ್ದಾರೆ. ಮೃತ ಅಂತ್ಯ ಕ್ರಿಯೆಯೂ ಸಂಜೆ ಮುಕ್ತಿಧಾಮದಲ್ಲಿ ನಡೆಸಲಾಯಿತೆಂದು ಕುಟುಂಬದ ಮೂಲಗಳು ತಿಳಿಸಿವೆ. ನೇತ್ರದಾನ : ಮೃತ ನವರತನ್‌ಮಾಲ್‌ರವರ ನೇತ್ರಗಳನ್ನು ನಗರದ ಬಸವೇಶ್ವರ ಐ ಜ್ಯೋತಿ ಬ್ಯಾಂಕ್‌ಗೆ ಮನೆಯವರ ಅನುಮತಿಯೊಂದಿಗೆ ದಾನವನ್ನು ಮಾಡಲಾಗಿದೆ. ಸಂತಾಪ ; ನಗರದ ಉದ್ಯಮಗಳಾದ ನವರತನ್ ಮಲ್ ರವರ ನಿಧನಕ್ಕೆ ನಗರದ ಹಲವಾರು ಉದ್ಯಮಿಗಳು, ಜೈನ್ ಸಮುದಾಯದ ಮುಖಂಡರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸಂತಾಪವನ್ನು ಸೂಚಿಸಿದ್ದಾರೆ.

---

**ಕಾರ್ಯಕರ್ತರಿಗೆ ಮಾಜಿ ಸಚಿವ ಹೆಚ್.ಆಂಜನೇಯ ಕರೆ**

# ಕಾಂಗ್ರೇಸ್ ಗೆಲುವಿಗೆ ಸೇನಾನಿಗಳಂತೆ ಕೆಲಸ ಮಾಡಿ

» **ಹೊಳಲ್ಕೆರೆ**

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೇಸ್ ಪಕ್ಷದ ಅಭ್ಯರ್ಥಿಯ ಬಿ.ಎನ್.ಚಂದ್ರಪ್ಪರನ್ನು ಭಾರಿ ಬಹುಮತಗಳಿಂದ ಗೆಲುವಿಗೆ ಶ್ರಮಿಸಬೇಕೆಂದು ಮಾಜಿ ಸಚಿವ ಹೆಚ್. ಆಂಜನೇಯ ಕರೆ ನೀಡಿದರು.

ತಾಲೂಕು ಬ್ಲಾಕ್ ಕಾಂಗ್ರೇಸ್ ಸಮಿತಿಯಿಂದ ಪಟ್ಟಣದ ಗಣಪತಿ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಬೂತ್ ಮಟ್ಟದ ಸಮಿತಿ ಸದಸ್ಯರಿಗೆ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ರಾಜ್ಯದಲ್ಲಿ ಕಾಂಗ್ರೇಸ್ ಪಕ್ಷದ ಸರಕಾರ ಸಾಕಷ್ಟುಜನರಪರಯೋಜನೆಕೈಗೊಂಡಿದೆ. ಜನ ಸಾಮಾನ್ಯ ಜೀವನಾಡಿಯಾಗಿರುವ ಕಾಂಗ್ರೇಸ್ ಸರಕಾರ 5 ಗ್ಯಾರಂಟಿ ಸೌಲಭ್ಯಗಳನ್ನು ಜನರಿಗೆ ನೀಡಿದೆ. ಬಡವರ ದಲಿತರ ಹಿಂದುಳಿದವರ, ಜನ ಸಾಮಾನ್ಯರಿಗೆ ಶಕ್ತಿ ನೀಡಿದೆ. ದೇಶದಲ್ಲಿ ಕಾಂಗ್ರೇಸ್ ಅಧಿಕಾರ ಬರಬೇಕು. ಕೋಮುವಾದಿಗಳು ಕೊನೆಗೊಂಡು ಜಾತ್ಯಾತೀತ ಚಿಂತನೆ ಜತೆ ಸಂವಿಧಾನ ಆಶಯಗಳನ್ನು ಈಡೇರಿಸಬೇಕು. ಸರಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆ ಕುರಿತು ಜನರಿಗೆ ಕಾರ್ಯಕರ್ತರು ಅರಿವು ಮೂಡಿಸಬೇಕೆಂದರು.

ಉಳುವವನೆ ಭೂಮಿಯ ಒಡೆಯ, ರೈಲ್ವೆ, ಶಿಕ್ಷಣ, ಆರೋಗ್ಯ ಸೇರಿ ದೇಶ ಸರ್ವಾಂಗೀಣ ಅಭಿವೃದ್ಧಿಗೆ ಕಾಂಗ್ರೇಸ್ ಪಕ್ಷ ನೀಡಿದ ಕೊಡುಗೆ ಅಪಾರ. ಬಿಜೆಪಿ ಜನರಿಗೆ ಸುಳ್ಳು ಹೇಳುತ್ತಿದೆ. ದೇಶಾಭಿಮಾನ, ಅಭಿವೃದ್ಧಿ. ದೇವರ ಹೆಸರಲ್ಲಿ ರಾಜಕೀಯ ಸರಿಯಲ್ಲ ಎಂದರು.

ಚಿತ್ರದುರ್ಗ ಜಿಲ್ಲೆ ಕಾಂಗ್ರೇಸ್ ಪಕ್ಷದ ಭದ್ರಕೋಟೆ. 8 ವಿಧಾನಸಭಾ ಕ್ಷೇತ್ರದಲ್ಲಿ 7 ಕ್ಷೇತ್ರದಲ್ಲಿ ಕಾಂಗ್ರೇಸ್ ಪಕ್ಷದ ಗೆಲುವು ಸಾಧಿಸಿದೆ. ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೇಸ್ ಪಕ್ಷದ ಕಳೆದ ವಿಧಾನ ಸಭಾ ಚುನಾವಣೆಗಿಂತ ಹೆಚ್ಚು ಮತಗಳಿಂದ ಜಯಗಳಿಸಲು ಕಾರ್ಯಕರ್ತರು ಬೂತ್ ಮಟ್ಟದಲ್ಲಿ ಪರಿಣಾಮಕಾರಿಯಾಗಿ ಕೆಲಸ ಮಾಡಬೇಕೆಂದರು.

ನಾನು ರಾಮಭಕ್ತನೇ, ಕಾಂಗ್ರೇಸ್ ಪಕ್ಷದ ಕೋಟ್ಯಾಂತರ ಜನ ರಾಮಭಕ್ತರು ಇದ್ದಾರೆ. ನಾವೆಲ್ಲ ನಿಜವಾದ ಭಕ್ತರು. ನಾವೆಂದು ದೇವರ ಹೆಸರಲ್ಲಿ ರಾಜಕೀಯ ಮಾಡಿಲ್ಲ. ಬಿಜೆಪಿ ರಾಮನ ಹೆಸರಲ್ಲಿ ರಾಜಕೀಯ ಮಾಡಿ ಜನರಿಗೆ ತಪ್ಪು ಸಂದೇಶ ನೀಡುತ್ತಿದೆ. ನಾವೆಲ್ಲ ಸಾಕಷ್ಟು ದೇವಸ್ಥಾನ, ಮಠ, ಮಂದಿರ, ದೇವಸ್ಥಾನ ನಿರ್ಮಾಣಕ್ಕೆ ಶ್ರಮಿಸಿದ್ದೇವೆ.

ಕೆ.ಪಿ.ಸಿ.ಸಿ. ಸದಸ್ಯೆ ದೀಪಾ ಮಾತನಾಡಿ, ಬೂತ್ ಮಟ್ಟದ ಸಂಘಟನೆ ಪಕ್ಷದ ಗೆಲುವಿಗೆ ಸಾಧ್ಯವಾಗಲಿದೆ. ಕಾಂಗ್ರೇಸ್ ಪಕ್ಷದ ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟಿದೆ. ಕಾಂಗ್ರೇಸ್ ಪಕ್ಷದ ಕಾರ್ಯಕರ್ತರು ಯೋದರಂತೆ ಹೋರಾಟ ನಡೆಸಿ ಪಕ್ಷದವನ್ನು ಗೆಲ್ಲಿಸಬೇಕೆಂದರು.

ಕಾಂಗ್ರೇಸ್ ಪಕ್ಷದ ಜಿಲ್ಲಾಧ್ಯಕ್ಷ ತಾಜ್‌ಪೀರ್, ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷ ಹೆಚ್.ಟಿ.ಹನುಮಂತಪ್ಪ, ಭರಮಸಾಗದ ಅಧ್ಯಕ್ಷ ಹೆಚ್.ಟಿ.ಪ್ರಕಾಶ್ ಅಳಗವಾಡಿ, ಗ್ಯಾರಂಜಿ ಯೋಜನೆ ಅಧ್ಯಕ್ಷ ಶಿವಣ್ಣ, ಉಪಾಧ್ಯಕ್ಷ ಮೈಲಾಪ್ಪ, ಲೋಕಸಭಾ ಚುನಾವಣೆ ಉಸ್ತುವರಿ ಅಮೃತೇಶ್, ಮುಖಂಡರಾದ ಕಾಟೆಹಳ್ಳಿ ಶಿವಕುಮಾರ್, ಜಿ.ಪಂ.ಮಾಜಿ ಸದಸ್ಯರಾದ ಬಿ.ಗಂಗಾಧರ್, ಎಂ.ಜಿ.ಲೋಹಿತ್ ಪಿ.ಆರ್.ಶಿವಕುಮಾರ್, ಡಿ.ಕೆ.ಶಿವಮೂರ್ತಿ, ಪುರಸಭೆ ಸದಸ್ಯರಾದ ಸೈಯದ್ ಸಜೀಲ್, ಮಸ್ಸೂರು, ವಿಶ್ವನಾಥನಹಳ್ಳಿತಿಮ್ಮಪ್ಪ, ಎ.ಚಿತ್ತಪ್ಪಯಾದಪ್ಪ, ಪುರಷೋತ್ತಮ, ಹಲವಾರು ಮುಖಂಡರು ಉಪಸ್ಥಿತರಿದ್ದರು.

---

# ಪ್ರೊ.ಡಿ.ಅಂಜಿನಪ್ಪನವರ ಜೀವ ಚಿಗುರಿನ ಧ್ಯಾನ ನುಡಿನಮನ ಕೃತಿ ಲೋಕಾರ್ಪಣೆ



» **ಚಿತ್ರದುರ್ಗ**

ಪ್ರೊ.ಡಿ.ಅಂಜಿನಪ್ಪನವರ ಅಕಾಲಿಕ ನಿಧನ ಸಾಹಿತ್ಯ ಲೋಕಕ್ಕೆ ದೊಡ್ಡ ನಷ್ಟ ಎಂದು ಜಾನಪದ ವಿದ್ವಾಂಸ ಡಾ.ಮೀರಾಸಾಬಿಹಳ್ಳಿ ಶಿವಣ್ಣ ನೊಂದು ನುಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಎಂ.ಜಯಣ್ಣ ಚಾರಿಟಬಲ್ ಟ್ರಸ್ಟ್, ಅರುಂಧತಿ ಪ್ರಕಾಶನ, ಪ್ರೊ.ಡಿ.ಅಂಜಿನಪ್ಪ ಒಡನಾಡಿಗಳು ವಿದ್ಯಾರ್ಥಿ ಬಳಗ ಇವರುಗಳ ಸಂಯುಕ್ತಾಶ್ರಯದಲ್ಲಿ ರೋಟರಿ ಬಾಲಭವನದಲ್ಲಿ ಏರ್ಪಡಿಸಲಾಗಿದ್ದ ಪ್ರೊ.ಡಿ.ಅಂಜಿನಪ್ಪ ಜೀವ ಚಿಗುರಿನ ಧ್ಯಾನ ನುಡಿನಮನ,ಕೃತಿಗಳ ಅವಲೋಕನ, ಕವನ ಸಂಕಲನ ಬಿಡುಗಡೆಗೊಳಿಸಿ ಮಾತನಾಡಿದರು.

ಪ್ರೊ.ಡಿ.ಅಂಜಿನಪ್ಪ ಆರು ವರ್ಷಗಳ ಅವಧಿಯಲ್ಲಿ ಐದು ಕೃತಿಗಳನ್ನು ಪ್ರಕಟಿಸಿರುವುದು ಸುಲಭದ ಕೆಲಸವಲ್ಲ. ಅನಾರೋಗ್ಯಕ್ಕೆ ತುತ್ತಾಗಿ ಎಲ್ಲರನ್ನು ಅಗಲಿರುವುದು ಬೇಸರ ತಂದಿದೆ. ಅವರ ಅಪ್ರಕಟಿತ ಕೃತಿಗಳನ್ನು ಕುಟುಂಬದವರು ನೀಡಿದರೆ ಪ್ರಕಟಗೊಳಿಸುತ್ತೇನೆ. ನನಗೆ ಪರಮಾತ್ಮ ಶಿಷ್ಯನಾಗಿದ್ದ ಪ್ರೊ.ಡಿ.ಅಂಜಿನಪ್ಪ ನನ್ನ ಮೇಲೆ ಅಪಾರವಾದ ಪ್ರೀತಿ ಗೌರವವಿಟ್ಟುಕೊಂಡಿದ್ದ. ಅದ್ಭುತವಾದ ವ್ಯಕ್ತಿತ್ವ ಆತನದು. ಬೆಂಗಳೂರಿನ ಸಿ.ವಿ.ಜಿ.ಪಬ್ಲಿಕೇಷನ್ ಚಂದ್ರು ಜಿಲ್ಲೆಯ ಅನೇಕ ಲೇಖಕರ ಪುಸ್ತಕಗಳನ್ನು ಪ್ರಕಟಿಸಿದ್ದಾರೆಂದು ಶ್ಲಾಘಿಸಿದರು.

ಸಾಹಿತಿ ಹಾಗೂ ಚಿಂತಕರಾದ ಡಾ.ಶಿವಲಿಂಗಪ್ಪ ಮೀರಾಸಾಬಿಹಳ್ಳಿ ಮಾತನಾಡಿ ಪ್ರೊ.ಡಿ.ಅಂಜಿನಪ್ಪ ಒಬ್ಬ ಪ್ರತಿಭಾವಂತ ಮಿತ ಭಾಷಿ, ನಿಷ್ಠುರತೆಯ ಸ್ವಭಾವ. ಗಮನಾರ್ಹವಾದ ಹೊಸತನದ ವಿಮರ್ಶಕ. ಅವರ ಕೃತಿಗಳನ್ನು ಓದಿದಾಗ ಬರವಣಿಗೆಯ ಎಂತಹ ಸಾಮರ್ಥ್ಯ ಶಕ್ತಿ ಇತ್ತು ಎನ್ನುವುದು ಗೊತ್ತಾಗುತ್ತದೆ. ವಿಮರ್ಶಕನಿಗೆ ಮುಕ್ತಾಯವಿಲ್ಲದ ಅಧ್ಯಯನ ಬೇಕು. ಬರಹಗಾರನಿಗೆ ಹಾಗೂ ವಿಮರ್ಶಕನಿಗೆ ಸಾಮಾಜಿಕ ಹೊಣೆಗಾರಿಕೆಯಿರಬೇಕು. ಕವಿ, ಲೇಖಕಕೃತಿಗಳನ್ನುರಚಿಸಬೇಕಾದರೆಮುಖ್ಯವಾದ ಕಾರಣಗಳಿರುತ್ತವೆ. ವಿಮರ್ಶೆಯ ಪಥವನ್ನು ಪ್ರೊ.ಡಿ.ಅಂಜಿನಪ್ಪ ತಾನೇ ಸೃಷ್ಟಿಕೊಂಡವನು. ಸಮ ಸಮಾಜ ಸಾಮಾಜಿಕ ನ್ಯಾಯದ ಪರಿಕಲ್ಪನೆ ಕೃತಿಯಲ್ಲಿರಬೇಕು ಎಂದರು.

ಕೃತಿಗಳ ಅವಲೋಕನ ಹಾಗೂ ಕವನ ಸಂಕಲನ ಅರ್ಪಣೆ ಬಿಡುಗಡೆ ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಹಿರಿಯ ಸಾಹಿತಿ ಹಾಗೂ ಚಿಂತಕ ಪ್ರೊ.ಹೆಚ್.ಲಿಂಗಪ್ಪ ಮಾತನಾಡಿ

ಪ್ರೊ.ಡಿ.ಅಂಜಿನಪ್ಪ ವಿಮರ್ಶೆಯಲ್ಲಿ ಡಿ.ಆರ್.ನಾಗರಾಜ್‌ರವರಿಗೆ ಸರಿಗಟ್ಟುವಂತಹ ಪ್ರಮುಖರಾಗಿದ್ದರು. ಮೌನವಾಗಿದ್ದರೂ ಅಲ್ಪ ಕಾಲದಲ್ಲಿಯೇ ಅಗಾಧವಾದ ಸಾಹಿತ್ಯ ರಚಿಸುವಲ್ಲಿ ಅಸಾಧಾರಣ ಸೇವೆ ಸಲ್ಲಿಸಿದ್ದಾರೆ. ಅವರು ಆಯ್ಕೆ ಮಾಡಿಕೊಂಡಿದ್ದು, ವಿಮರ್ಶೆ ಮತ್ತು ವೈಚಾರಿಕತೆ. ಮೈಸೂರಿನ ರೇವಯ್ಯ ಅರಿವೆಯವರ ಮುಂದಿನ ಭಾಗವಾಗಿದ್ದರು ಎಂದು ಗುಣಗಾನ ಮಾಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ, ಸಾಹಿತಿ ಮೋದೂರು ತೇಜ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ತುಮಕೂರು ಜಿಲ್ಲೆ ಮಧುಗಿರಿಯ ಎಂ.ಆರ್. ಮಂಜುನಾಥ್ ಬಿ.ಎಂ.ಗುರುನಾಥ್ ಇವರುಗಳು ಮಾತನಾಡಿದರು.

ಜಿ.ಎಸ್.ಉಜ್ಜಿನಪ್ಪ, ಡಾ.ಜಿ.ಎನ್. ಮಲ್ಲಿಕಾರ್ಜುನಪ್ಪ, ಡಾ.ಲೋಕೇಶ್ ಅಗಸನಕಟ್ಟೆ, ಪ್ರೊ.ಟಿ.ವಿ.ಸುರೇಶ್‌ಗುಪ್ತ ಇನ್ನು ಅನೇಕರು ಸಮಾರಂಭದಲ್ಲಿದ್ದರು.

## ಕಾಮನಬಾವಿ ಬಡಾವಣೆ ವಿಶ್ವಜಲ ದಿನ ಆಚರಣೆ



» **ಚಿತ್ರದುರ್ಗ**

ಜೀವ ಜಲ ಅಮೂಲ್ಯವಾದ ನೀರನ್ನು ವ್ಯರ್ಥ ಮಾಡದೆ ಮಿತವಾಗಿ ಬಳಸುವಂತೆ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ದಿನೇಶ್ ಪೂಜಾರಿ ಹೇಳಿದರು. ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ನಗರ ಸಿ. ವಲಯದ ಕಾಮನಬಾವಿ ಬಡಾವಣೆ ಕಾರ್ಯಕ್ಷೇತ್ರದಲ್ಲಿ ವಿಶ್ವಜಲದಿನ ಉದ್ಘಾಟಿಸಿ ಮಾತನಾಡಿದರು. ಸಕಲ ಜೀವರಾಶಿಗಳಿಗೂ ನೀರು ಬೇಕು. ಮಾನವನಿಗೆ ಕುಡಿಯಲು ಹಾಗೂ ದಿನನಿತ್ಯದ ಬಳಕೆಗೆ ನೀರು ಬೇಕೆ ಬೇಕು. ಮಳೆ ನೀರನ್ನು ಹರಿದು ಹೋಗಲು ಬಿಡದೆ ಭೂಮಿಯಲ್ಲಿ ಇಂಗಿಸುವ ಕೆಲಸವಾದಾಗ ಅಂತರ್ಜಲ ಮಟ್ಟ ಹೆಚ್ಚಲಿದೆ. ರಾಜ್ಯಾದ್ಯಂತ ನಾಲ್ಕು ನೂರು ಶುದ್ಧ ನೀರಿನ ಘಟಕಗಳನ್ನು ನಿರ್ಮಿಸಲಾಗಿದೆ. 714 ಕೆರೆಗಳ ಹೂಳೆತ್ತಲಾಗಿದೆ. ಅರಣ್ಯ ಇಲಾಖೆಯ ಸಹಯೋಗದೊಂದಿಗೆ ಏಳು ಲಕ್ಷ ಸಸಿಗಳನ್ನು ನಾಟಿ ಮಾಡಲಾಗಿದೆ. ಗಿಡ-ಮರಗಳನ್ನು ಕಡಿದು ಪರಿಸರವನ್ನು ನಾಶಪಡಿಸುವುದರಿಂದ ಸಕಾಲಕ್ಕೆ ಮಳೆಯಾಗುವುದಿಲ್ಲ. ಹಾಗಾಗಿ ಪ್ರತಿಯೊಬ್ಬರು ಪರಿಸರವನ್ನು ಕಾಪಾಡಬೇಕಾಗಿದೆ ಎಂದು ತಿಳಿಸಿದರು. ಈಗಿನಿಂದಲೇ ನೀರನ್ನು ಉಳಿತಾಯ ಮಾಡಿದರೆ ಮುಂದಿನ ಪೀಳಿಗೆಗೆ ಜಲವನ್ನು ಸಂರಕ್ಷಿಸಬಹುದು. ನಲ್ಲಿ ಮತ್ತು ಪೈಪ್‌ಗಳಲ್ಲಿ ನೀರು ಸೋರಿಕೆಯಾಗುತ್ತಿರುತ್ತದೆ. ಮನೆಯಲ್ಲಿ ಬಳಕೆಯಾಗುವ ನೀರನ್ನು ಚರಂಡಿಗೆ ಬಿಡದೆ ಗಿಡ ಮರಗಳಿಗೆ ಸೇರುವಂತೆ ಹಿಂಗುಗುಂಡಿ ಮಾಡಿಕೊಳ್ಳಬೇಕು. ಮಳೆ ನೀರು, ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಿಕೊಳ್ಳುವುದು ಒಳ್ಳೆಯದು ಎಂದರು. ಜನಜಾಗೃತಿ ವೇದಿಕೆ ಸದಸ್ಯೆ ಶ್ರೀಮತಿ ರೂಪ ಜನಾರ್ಧನ್, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ತಾಲ್ಲೂಕು ಯೋಜನಾಧಿಕಾರಿ ಬಿ.ಅಶೋಕ್, ಜ್ಞಾನವಿಕಾಸ ಸಮನ್ವಯಾಧಿಕಾರಿ ಸುಧಾ ಇನ್ನು ಅನೇಕು ವೇದಿಕೆಯಲ್ಲಿದ್ದರು.

---

## ವಿದೇಶಗಳಲ್ಲಿ ಜಾಬ್ ಆಮಿಷ, ನಕಲಿ ಏಜೆನ್ಸಿಗಳ ಜಾಬ್ ಮಾಹಿತಿ ಜನರಿಗಿರಲಿ

ದಾವಣಗೆರೆ : ವಿದೇಶಗಳಲ್ಲಿ ಉದ್ಯೋಗ ಆಮಿಷವೊಡ್ಡುವ ನಕಲಿ ಏಜೆಂಟರುಗಳ ಹಾವಳಿ ರಾಜ್ಯದಲ್ಲಿ ಹೆಚ್ಚಾಗುತ್ತಿರುವುದು ವರದಿಯಾಗಿದೆ. ಭಾರತ ಸರ್ಕಾರದ ವಿದೇಶಾಂಗ ಸಚಿವಾಲಯವು ಈ ಬಗ್ಗೆ ಎಚ್ಚರಿಕೆಯನ್ನು ನೀಡಿದ್ದು ಅನಧಿಕೃತ ಕಂಪನಿಗಳು, ವ್ಯಕ್ತಿಗಳ ಹೆಸರಿನಲ್ಲಿ ಸಾರ್ವಜನಿಕರಿಗೆ ವಿದೇಶಗಳಲ್ಲಿ ಉದ್ಯೋಗಗಳ ಕೊಡಿಸುವ ಭರವಸೆಗೆ ಮೋಸ ಹೋಗದಂತೆ ಅಧಿಕೃತ ಕಂಪನಿಗಳ ಮಾಹಿತಿ ಹೊಂದಬೇಕೆಂದು ಜಿಲ್ಲಾ ಪೋಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ತಿಳಿಸಿದ್ದಾರೆ. ಸಾಗರೋತ್ತರ ನೇಮಕಾತಿಗೆ ಸಂಬಂಧಿಸಿದಂತೆ ವಿದೇಶಾಂಗ ಸಚಿವಾಲಯದಲ್ಲಿ ನೊಂದಾಯಿತ ಏಜೆಂಟ್, ಕಂಪನಿಗಳ ಪಟ್ಟಿಯನ್ನು ಜಿಲ್ಲಾ ರಕ್ಷಣಾಧಿಕಾರಿಗಳ ಕಚೇರಿಯಿಂದ ಮಾಹಿತಿಯನ್ನು ಪಡೆಯಬಹುದಾಗಿದೆ. ಅನಧಿಕೃತ ವ್ಯಕ್ತಿಗಳು, ಕಂಪನಿಗಳು ಆಮಿಷವೊಡ್ಡಿದಲ್ಲಿ ಸ್ಥಳೀಯ ಪೋಲೀಸ್ ಠಾಣೆಯಲ್ಲಿ ದೂರು ದಾಖಲಿಸಬಹುದಾಗಿದೆ.

## ಪ್ರಮುಖ ಸುದ್ದಿ

**400 ವಾಟರ್ ಕೂಲರ್‌ಗಳ ವಶ, ಪ್ರಕರಣ ದಾಖಲಿಸಲು ಜಿಲ್ಲಾ ಚುನಾವಣಾಧಿಕಾರಿಗಳ ಸೂಚನೆ**

# ವಾಟರ್ ಕೂಲರ್‌ಗಳ ಇ-ವೇಬಿಲ್ ನೀಡಿಕೆಯಲ್ಲಿ ವ್ಯತ್ಯಾಸ

» **ದಾವಣಗೆರೆ**

ಬಾಂಬೆಯಿಂದ ದಾವಣಗೆರೆಗೆ ಪೂರೈಕೆ ಮಾಡಿದ 400 ವಾಟರ್ ಕೂಲರ್‌ಗಳ ಇ-ವೇಬಿಲ್ ಸೃಜನೆಯಲ್ಲಿ ವ್ಯತ್ಯಾಸ ಕಂಡು ಬಂದ ಹಿನ್ನಲೆ ವಶಕ್ಕೆ ಪಡೆದು ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಮಂಗಳವಾರ ವಾಣಿಜ್ಯ ತೆರಿಗೆ ಇಲಾಖೆ ಕಚೇರಿ ಮುಂಭಾಗದದಲ್ಲಿ ವಾಹನದೊಂದಿಗೆ ವಸ್ತುಗಳ ಪರಿಶೀಲನೆ ನಡೆಸಿದರು. ವಾಟರ್ ಕೂಲರ್ ಸಾಗಣೆ ಮಾಡಿದ ವಾಹನಗಳನ್ನು ವಾಣೀಜ್ಯ ತೆರಿಗೆ ಇಲಾಖೆ ಜಾಗೃತ ದಳದ ಅಧಿಕಾರಿಗಳು ಮಾರ್ಚ್ 22 ರಂದು ಎಪಿಎಂಸಿ ಪೋಲೀಸ್ ಠಾಣೆ ವ್ಯಾಪ್ತಿಯಲ್ಲಿ ಗಸ್ತುವೇಳೆ ವಾಹನ ವಶಕ್ಕೆ ಪಡೆದು ಪರಿಶೀಲನೆ ನಡೆಸಿದಾಗ



ರೂ.3,11,520 ಮೌಲ್ಯದ 400 ವಾಟರ್ ಕೂಲರ್‌ಗಳನ್ನು ಎರಡು ವಾಹನಗಳಲ್ಲಿ ಬಾಂಬೆಯಿಂದ ದಾವಣಗೆರೆ ಹರಿಹೊಂ ಎಂಟರ್‌ಪ್ರೈಸಸ್‌ಗೆ ಪೂರೈಕೆಯಾಗಿದ್ದು ದಾವಣಗೆರೆಯಲ್ಲಿ ವಾಹನ ತಪಾಸಣೆ ಮಾಡುವುದಕ್ಕಿಂತ 3 ಗಂಟೆ ಮೊದಲು ಮಾತ್ರ ಇ-ವೇಬಿಲ್ ಸೃಜನೆಯಾಗಿರುವುದು ಕಂಡು ಬಂದ ಹಿನ್ನಲೆಯಲ್ಲಿ ಇದು ಅನುಮಾನಾಸ್ಪದವಾಗಿದೆ. ಬಾಂಬೆಯಿಂದ ದಾವಣಗೆರೆಗೆ ಆಗಮಿಸಲು ಕನಿಷ್ಠ 18 ಗಂಟೆಗಳ ಕಾಲ ಪ್ರಯಾಣದ ಅವಧಿಯಾಗಲಿದೆ. ವಾಹನ ವಶಕ್ಕೆ ಪಡೆಯುವುದಕ್ಕಿಂತ ಮೂರು ಗಂಟೆ ಮೊದಲು ಆನ್‌ಲೈನ್ ಬಿಲ್ ಸೃಜನೆ ಮಾಡಿರುವುದು ಕಂಡು ಬಂದಿದ್ದು ಇದು ಜಿ.ಎಸ್.ಟಿ. ನಿಯಮದ ಸ್ಪಷ್ಟ ಉಲ್ಲಂಘನೆಯಾಗಿರುತ್ತದೆ.

ಮಾರ್ಚ್ 22 ರಂದು ಇವುಗಳನ್ನು ವಶಕ್ಕೆಪಡೆದು ಎಫ್.ಎಸ್.ಟಿ.ಗೆ ತನಿಖೆಗಾಗಿ ವಹಿಸಲಾಗಿತ್ತು. ಆದರೆ ಸ್ಪಷ್ಟನೆ ನೀಡದ ಕಾರಣ ಇದು ಚುನಾವಣಾ ಸಂದರ್ಭದಲ್ಲಿ ವಿತರಣೆಗೆಬಳಸಲು ಉದ್ದೇಶಿಸಿರಬೇಕೆಂದು ಅನುಮಾನಿಸಲಾಗಿದೆ.

ಜಿಲ್ಲಾ ಚುನಾವಣಾಧಿಕಾರಿಯವರು ಸದರಿ ಸಂಸ್ಥೆಯ ಮೇಲೆ ಪ್ರಕರಣ ದಾಖಲಿಸಿ ಮುಂದಿನ ತನಿಖೆ ಕೈಗೊಳ್ಳಲು ನಿರ್ದೇಶನ ನೀಡಿರುತ್ತಾರೆ.

ಈ ಪರಿಶೀಲನೆ ವೇಳೆ ದಾವಣಗೆರೆ ಪಾಲಿಕೆ ಆಯುಕ್ತರು ಹಾಗೂ ಸಹಾಯಕ ಚುನಾವಣಾಧಿಕಾರಿ ರೇಣುಕಾ, ವಾಣಿಜ್ಯ ತೆರಿಗೆ ಇಲಾಖೆ ಸಹಾಯಕ ಆಯುಕ್ತರಾದ ಮಂಜುನಾಥ್, ವಾಣಿಜ್ಯ ತೆರಿಗೆ ಇಲಾಖೆ ತನಿಖಾಧಿಕಾರಿ ನಟರಾಜ್ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T